ಸಂಪುಟ : 8 ಸಂಚಿಕೆ : 143 ಪುಟ : 4 ಬೆಲೆ : 3.00 ಶನಿವಾರ ಜುಲೈ 08, 2023 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 8 Issue : 143 Pages : 4 Price : 3.00 Saturday July 08, 2023 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25




# ಬಹುನಿರೀಕ್ಷಿತ ರಾಜ್ಯ ಬಜೆಟ್‌ಗೆ ಬಹುವಿಧ ಪ್ರತಿಕ್ರಿಯೆ

## ಅಭಿವೃದ್ಧಿ ಪಥದ ಜನಪರ ಬಜೆಟ್: ಎಚ್ ಕೆ ಪಾಟೀಲ

■ ವಿಜಯಸಾಕ್ಷಿ ಸುದ್ದಿ, ಗದಗ

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಡಿಸಿರುವ 3,24,478.00 ಕೋಟಿ ರೂ.ಗಳ ಮುಂಗಡ ಪತ್ರ ಅರ್ಥವ್ಯವಸ್ಥೆಯನ್ನು ಅಭಿವೃದ್ಧಿ ಪಥದಲ್ಲಿ ಕೊಂಡೊಯ್ಯುವ, ರಾಜ್ಯದ ಎಲ್ಲಾ ವರ್ಗಗಳ ಸೇರ್ಪಡೆ ಮಾಡುವ ಜನಪರ ಬಜೆಟ್ ಆಗಿದ್ದು, ಪ್ರಣಾಳಿಕೆಯಲ್ಲಿ ಘೋಷಿಸಿದ್ದ ಗ್ಯಾರಂಟಿಗಳನ್ನು ಮುಂಗಡ ಪತ್ರದಲ್ಲಿ ಪ್ರಕಟಿಸಿ, ಕಾಂಗ್ರೆಸ್ ಪಕ್ಷದ ಬದ್ಧತೆಯನ್ನು ಸ್ಪಷ್ಟವಾಗಿ ವ್ಯಕ್ತಪಡಿಸಲಾಗಿದೆ ಎಂದು ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯಹಾರ, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್ ಕೆ ಪಾಟೀಲ ಅಭಿಪ್ರಾಯಪಟ್ಟಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಕರ್ನಾಟಕದಲ್ಲಿ ಹೊಸದಾಗಿ ಅಧಿಕಾರಕ್ಕೆ ಬಂದಿರುವ ಕಾಂಗ್ರೆಸ್ ಸರ್ಕಾರ ಸಾಮಾಜಿಕ ನ್ಯಾಯದ ದಿಗ್ವಿಜಯ ಯಾತ್ರೆಯನ್ನು ಮತ್ತೆ ಪ್ರಾರಂಭಿಸಿದೆ. ಎಲ್ಲಾ ವಲಯಗಳ, ವರ್ಗಗಳ ಜನಕಲ್ಯಾಣದ ಜವಾಬ್ದಾರಿಯುತ ಮುನ್ನಡೆಯ ಕಾರ್ಯಕ್ರಮಗಳನ್ನು ಘೋಷಿಸಲಾಗಿದೆ.



ಬಡವರು, ದೀನ ದಲಿತರು, ಶೋಷಿತರು, ಶ್ರಮಿಕರು, ಹಿಂದುಳಿದವರು ಮತ್ತು ಇತರೆ ಎಲ್ಲಾ ವರ್ಗಗಳ ಹಿತರಕ್ಷಣೆಯ ಭರವಸೆದಾಯಕ ಮುಂಗಡ ಪತ್ರವಾಗಿದೆ. ಸಮಗ್ರ ಅಭಿವೃದ್ಧಿಯ ಕಲ್ಪನೆಗಳನ್ನು ಅನುಷ್ಠಾನಗೊಳಿಸುವ ಈ ಮುಂಗಡ ಪತ್ರವು ನಾಡಿನ ಜನರ ಬದುಕಿನಲ್ಲಿ ಗುಣಾತ್ಮಕ ಬದಲಾವಣೆಗೆ ಕಾರಣವಾಗಲಿದೆ. ▶▶ 3ನೇ ಪುಟಕ್ಕೆ


## ದೇಶಕ್ಕೇ ಮಾದರಿಯಾದ ರಾಜ್ಯ ಸರಕಾರದ ಬಜೆಟ್

■ ವಿಜಯಸಾಕ್ಷಿ ಸುದ್ದಿ, ರೋಣ

2023-24ನೇ ಸಾಲಿನ ರಾಜ್ಯ ಸರಕಾರದ ಬಜೆಟ್ ಇಡೀ ದೇಶಕ್ಕೆ ಮಾದರಿಯಾಗಿದ್ದು, ಈ ಬಜೆಟ್ ನಾಡಿನ ಸರ್ವ ಜನಾಂಗದವರ ಹಿತವನ್ನು ಬಯಸುವ ಮೂಲಕ ನಾಡಿನ ಅಭಿವೃದ್ಧಿಗೆ ನವ ಚೈತನ್ಯವನ್ನು ನೀಡಿದೆ ಎಂದು ಶಾಸಕ ಜಿ ಎಸ್ ಪಾಟೀಲ ಹೇಳಿದರು.

ಅವರು ಶುಕ್ರವಾರ ಪ್ರಸಕ್ತ ಸಾಲಿನ ಬಜೆಟ್ ಕುರಿತು ಮಾತನಾಡಿ, ಕಾಂಗ್ರೆಸ್ ನೇತೃತ್ವದ ರಾಜ್ಯ ಸರಕಾರ ಜನಪರವಾಗಿರುವ ಸರಕಾರ ಎಂದು ಮತ್ತೊಮ್ಮೆ ಸಾಬೀತುಪಡಿಸಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರು ಐದು ಗ್ಯಾರಂಟಿ ಯೋಜನೆಗಳನ್ನು ಈಡೇರಿಸುವುದರೊಂದಿಗೆ, ರೈತರ, ಬಡವರ, ಕಾರ್ಮಿಕರ, ಮಹಿಳೆಯರ, ವಿದ್ಯಾರ್ಥಿಗಳ ಹಿತವನ್ನು ಕೂಡ ಈ ಬಜೆಟ್‌ನಲ್ಲಿ ಬಯಸಿರುವುದು ಸ್ಪಷ್ಟವಾಗಿ ಕಂಡುಬರುತ್ತಿದೆ.

ರಾಜ್ಯ ಸರಕಾರದ ಬಜೆಟ್ ಮಂಡನೆಯಲ್ಲಿ ಸಮಗ್ರ ಕರ್ನಾಟಕದ ಅಭಿವೃದ್ಧಿಯನ್ನು ಬಯಸುವ ಮೂಲಕ ಉತ್ತರ ಕರ್ನಾಟಕದ ಜನತೆಗೆ ಹಾಗೂ ಜಿಲ್ಲೆಗಳ ಅಭಿವೃದ್ಧಿಗೆ ವಿಶೇಷ



ಕೊಡುಗೆಗಳನ್ನು ಸಹ ಘೋಷಣೆ ಮಾಡಲಾಗಿದೆ. ವಿಶೇಷವಾಗಿ ನಿರುದ್ಯೋಗಿ ಯುವಕರಿಗೆ ತರಬೇತಿ, ಗುಣಮಟ್ಟದ ಶಿಕ್ಷಣಕ್ಕೆ ಆದ್ಯತೆ, ಸರಕಾರಿ ಶಾಲೆಗಳ ಪ್ರಗತಿಗೆ ಮುನ್ನುಡಿ, ಹತ್ತನೇ ತರಗತಿಯವರೆಗೆ ಮೊಟ್ಟೆ ವಿತರಣೆ ಸೇರಿದಂತೆ ಹಲವಾರು ಜನಪರವಾದ ಯೋಜನೆಗಳಿಗೆ ಅನುದಾನವನ್ನು ಒದಗಿಸಲಾಗಿದೆ. ▶▶ 3ನೇ ಪುಟಕ್ಕೆ

## ಜಿಲ್ಲೆಯ ಜನತೆಯ ನಿರೀಕ್ಷೆ ಹುಸಿಯಾಗಿದೆ

■ ವಿಜಯಸಾಕ್ಷಿ ಸುದ್ದಿ, ಗದಗ

ಕೈಗಾರಿಕೆ ಸ್ಥಾಪನೆ, ಕೃಷಿ, ನೀರಾವರಿ ಸೇರಿದಂತೆ ಕೆಲ ಕ್ಷೇತ್ರಗಳ ಸಮಗ್ರ ಅಭಿವೃದ್ಧಿಯ ಮೇಲಿನ ಜಿಲ್ಲೆಯ ಜನರ ದಶಕಗಳ ನಿರೀಕ್ಷೆಯನ್ನು ರಾಜ್ಯ ಸರ್ಕಾರದ 2023-24ನೇ ಸಾಲಿನ ಬಜೆಟ್ ಹುಸಿಯಾಗಿಸಿದೆ ಎಂದು ಬಿಜೆಪಿ ಯುವ ನಾಯಕ ಅನಿಲ್ ಮೆಣಸಿನಕಾಯಿ ಅಭಿಪ್ರಾಯಪಟ್ಟಿದ್ದಾರೆ.

ಈ ಹಿಂದಿನ ಬಿಜೆಪಿ ಸರ್ಕಾರ 55 ಕಿ.ಮೀ ಉದ್ದದ ಗದಗ-ಯಲವಿಗಿ ನೂತನ ರೈಲು ಮಾರ್ಗ ಯೋಜನೆಯನ್ನು 640 ಕೋಟಿ ರೂ.ಗಳ ಅಂದಾಜು ವೆಚ್ಚದಲ್ಲಿ ರಾಜ್ಯ ಸರ್ಕಾರದ ವತಿಯಿಂದ ಭೂಸ್ವಾಧೀನ ವೆಚ್ಚವನ್ನು ಕೇಂದ್ರದ ಸಹಭಾಗಿತ್ವದೊಂದಿಗೆ ಜಾರಿಗೊಳಿಸಲು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವ ಬಗ್ಗೆ ಘೋಷಿಸಿತ್ತು. ಈ ಬಗ್ಗೆ ಪ್ರಸಕ್ತ ಸಾಲಿನ ಬಜೆಟ್‌ನಲ್ಲೂ ಪುನಃ ಪ್ರಸ್ತಾಪಿಸಿದ್ದು, ರಾಜ್ಯ ಸರ್ಕಾರ ಶೀಘ್ರವೇ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಬೇಕು.

ಬಿಜೆಪಿ ಸರ್ಕಾರದ ಅವಧಿಯಲ್ಲಿ



ಕಳಸಾ-ಬಂಡೂರಿ ನಾಲಾ ತಿರುವು ಯೋಜನೆ ಕಾಮಗಾರಿಗಾಗಿ ಸುಮಾರು 1,500 ಕೋಟಿ ರೂ. ಮೀಸಲಿಡಲಾಗಿತ್ತು. ಇದೀಗ ಕಾಂಗ್ರೆಸ್ ಸರ್ಕಾರವೂ ಒಂದು ಸಾವಿರ ಕೋಟಿ ರೂ. ಅನುದಾನ ಮೀಸಲಿಟ್ಟಿದ್ದು, ಶೀಘ್ರವೇ ಕಾಮಗಾರಿ ಆರಂಭಿಸಿ ಈ ಭಾಗದ ರೈತರಿಗೆ ಅನುಕೂಲ ಮಾಡಿಕೊಡಬೇಕು. ▶▶ 3ನೇ ಪುಟಕ್ಕೆ

## ಸಾಮಾಜಿಕ ನ್ಯಾಯವನ್ನು ಎತ್ತಿ ಹಿಡಿದ ಬಜೆಟ್: ಕೃಷ್ಣಗೌಡ ಪಾಟೀಲ ಹರ್ಷ

■ ವಿಜಯಸಾಕ್ಷಿ ಸುದ್ದಿ, ಗದಗ

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 14ನೇ ಬಾರಿಗೆ ಮಂಡಿಸಿರುವ ಬಜೆಟ್‌ನಲ್ಲಿ ಮಹಿಳೆಯರು, ದಲಿತರು, ರೈತರು, ಅಲ್ಪಸಂಖ್ಯಾತರು, ಬಹುಸಂಖ್ಯಾತರು ಮತ್ತು ಉದ್ದಿಮೆದಾರರು ಸೇರಿದಂತೆ ಸಮಾಜದ ಎಲ್ಲಾ ಸಮುದಾಯಗಳ ಒಳಿತಿನ ಬಗ್ಗೆ ಗಮನ ಹರಿಸಿರುವ ಜನಪರ ಬಜೆಟ್ ಆಗಿದೆ ಎಂದು ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಪ್ರಧಾನ ಕಾರ್ಯದರ್ಶಿ ಕೃಷ್ಣಗೌಡ ಪಾಟೀಲ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಕೃಷಿ, ನೀರಾವರಿ, ಶಿಕ್ಷಣ, ಮಹಿಳಾ ಮತ್ತು ಮಕ್ಕಳ ಕಲ್ಯಾಣ, ಗ್ರಾಮೀಣಾಭಿವೃದ್ಧಿ, ಆರೋಗ್ಯ ಹೀಗೆ ಎಲ್ಲ ಕ್ಷೇತ್ರಗಳಿಗೂ ಆದ್ಯತೆ ನೀಡಲಾಗಿದೆ. ರೈತರ, ಕಾರ್ಮಿಕರ ಹಿತ ಕಾಯುವ ಈ ಬಜೆಟ್, ಮಹಿಳೆಯರ ಮತ್ತು ದುರ್ಬಲರ



ಸಬಲೀಕರಣಕ್ಕೂ ಸಾಕಷ್ಟು ಆದ್ಯತೆ ನೀಡಿದ್ದು, ಸಾಮಾಜಿಕ ನ್ಯಾಯವನ್ನೂ ಎತ್ತಿಹಿಡಿದಿದೆ. ಮುಖ್ಯವಾಗಿ, ಜಿಲ್ಲೆಯ ಪ್ರವಾಸಿ ತಾಣಗಳನ್ನು ಅಭಿವೃದ್ಧಿಪಡಿಸುವ ಕುರಿತು ಪ್ರಸ್ತಾಪಿಸಿರುವುದು ಹೆಮ್ಮೆಯ ವಿಷಯವಾಗಿದೆ. ಜಿಲ್ಲೆಯ ಪ್ರವಾಸಿ ತಾಣಗಳು ಅಭಿವೃದ್ಧಿಯಾದರೆ ಉದ್ಯೋಗ ಸೃಷ್ಟಿಯಾಗುವುದರಲ್ಲಿ ಅನುಮಾನವಿಲ್ಲ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

## ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ ಜಿಲ್ಲಾ ಆಸ್ಪತ್ರೆಗೆ ಭೇಟಿ, ಪರಿಶೀಲನೆ

# ಅವ್ಯವಸ್ಥೆ ಸರಿಪಡಿಸಲು ಸೂಚನೆ

■ ವಿಜಯಸಾಕ್ಷಿ ಸುದ್ದಿ, ಗದಗ

ಲೋಕಾಯುಕ್ತ ನ್ಯಾಯಮೂರ್ತಿಗಳಾದ ಬಿ.ಎಸ್.ಪಾಟೀಲ ಅವರು ಶುಕ್ರವಾರದಂದು ನಗರದ ಹೊರ ವಲಯದಲ್ಲಿರುವ ಜಿಲ್ಲಾ ಆಸ್ಪತ್ರೆಗೆ ಭೇಟಿ ನೀಡಿದರು. ಜಿಲ್ಲಾ ಆಸ್ಪತ್ರೆಯ ಹೊರ ರೋಗಿಗಳ ವಿಭಾಗ, ನವಜಾತ ಶಿಶುಗಳ ವಿಭಾಗ, ಆಯ್.ಸಿ.ಯು ಸೇರಿದಂತೆ ವಿವಿಧ ವಿಭಾಗಗಳಿಗೆ ಖುದ್ದಾಗಿ ಭೇಟಿ ನೀಡಿ ಪರಿಶೀಲಿಸಿದರು. ಆಸ್ಪತ್ರೆಯಲ್ಲಿನ ಸ್ವಚ್ಛತೆ, ಕಾವಲುಗಾರರು ಇಲ್ಲದೇ



ಇರುವ ಕುರಿತು ಅಸಮಾಧಾನ ವ್ಯಕ್ತ ಪಡಿಸಿ ಈ ಕುರಿತು ಗಮನ ಹರಿಸುವಂತೆ ಸೂಚನೇ ನೀಡಿದರು. ಇದೇ ಸಂದರ್ಭದಲ್ಲಿ ಆಸ್ಪತ್ರೆಗೆ ಆಗಮಿಸಿದ ರೋಗಿಗಳ ಆಹ್ವಾಲು ಆಲಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ವೈಶಾಲಿ, ಎಂ.ಎಲ್, ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಸುಶೀಲಾ ಬಿ, ಜಿಲ್ಲಾ ಪೊಲೀಸ್ ಅಧೀಕ್ಷಕ ಬಿ.ಎಸ್.ನೇಮಗೌಡ, ಲೋಕಾಯುಕ್ತ ಅಧೀಕ್ಷಕ ಸತೀಶ. ಎಸ್.ಚಿಟಗುಬ್ಬಿ, ಅಪರ ಜಿಲ್ಲಾಧಿಕಾರಿ ಮಾರುತಿ.ಎಂ.ಪಿ, ಜಿಮ್ಸ್ ನಿರ್ದೇಶಕ ಡಾ.ಬಸವರಾಜ ಬೊಮ್ಮನಹಳ್ಳಿ, ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ಬಿ.ಎಸ್.ಕರಿಗೌಡರ, ಲೋಕಾಯುಕ್ತ ಡಿ.ವೈ.ಎಸ್.ಪಿ, ಶಂಕರ ರಾಗಿ, ಲೋಕಾಯುಕ್ತ ಇನ್ಸ್‌ಪೆಕ್ಟರ್ ರವಿ ಪುರುಷೋತ್ತಮ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು, ವೈದ್ಯಾಧಿಕಾರಿಗಳು ಹಾಜರಿದ್ದರು.



ಲೋಕಾಯುಕ್ತ ನ್ಯಾಯಮೂರ್ತಿಗಳಾದ ಬಿ.ಎಸ್. ಪಾಟೀಲ ಅವರು ಶುಕ್ರವಾರದಂದು ಗದಗ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಸಭೆ, ವಿವಿಧ ಇಲಾಖೆ, ಆಸ್ಪತ್ರೆ ಹಾಗೂ ವಸತಿ ಶಾಲೆಗಳ ಭೇಟಿಗೆ ಆಗಮಿಸಿದ ಸಂದರ್ಭದಲ್ಲಿ ನಗರದ ಪ್ರವಾಸಿ ಮಂದಿರದಲ್ಲಿ ಪೊಲೀಸ್ ಇಲಾಖೆ ವತಿಯಿಂದ ಗೌರವ ವಂದನೆ ನೀಡಲಾಯಿತು. ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಸುಶೀಲಾ.ಬಿ, ಜಿಲ್ಲಾ ಪೊಲೀಸ್ ಅಧೀಕ್ಷಕರ ಬಿ.ಎಸ್.ನೇಮಗೌಡ, ಲೊಕಾಯುಕ್ತ ಅಧೀಕ್ಷ ಸತೀಶ. ಎಸ್. ಚಿಟಗುಬ್ಬಿ ಉಪಸ್ಥಿತರಿದ್ದರು.

## ಯುವ ಪೀಳಿಗೆಯ ಭವಿಷ್ಯದ ಜೊತೆ ಚೆಲ್ಲಾಟವಾಡಿದ ಬಜೆಟ್

■ ವಿಜಯಸಾಕ್ಷಿ ಸುದ್ದಿ, ಗದಗ



ರಾಜ್ಯದ ಕಾಂಗ್ರೆಸ್ ಸರ್ಕಾರ ಕರ್ನಾಟಕ ರಾಜ್ಯದ ಜನರಿಗೆ ಹಾಗೂ ಹಿಂದೂಗಳಿಗೆ ದೊಡ್ಡ ಅನ್ಯಾಯ ಮಾಡಿರುವದು ಈ ಬಜೆಟ್ ಮೂಲಕ ಸಾಬೀತಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರು ಪ್ರಧಾನಿ ನರೇಂದ್ರ ಮೋದಿಯವರನ್ನು ವಿರೋಧಿಸುವ ಭರದಲ್ಲಿ ರಾಜ್ಯದ ಯುವ ಪೀಳಿಗೆಯ ಭವಿಷ್ಯದ ಜೊತೆ ಚೆಲ್ಲಾಟವಾಡಿದೆ ಎಂದು ಬಿಜೆಪಿ ಯುವ ಮೋರ್ಚಾ ಗದಗ ಜಿಲ್ಲಾಧ್ಯಕ್ಷ ಶಿವರಾಜಗೌಡ ಹಿರೇಮನಿಪಾಟೀಲ ಪ್ರತಿಕ್ರಿಯಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಕೈಗಾರಿಕೆ ಸ್ಥಾಪನೆ, ಕೃಷಿ, ನೀರಾವರಿ ಸೇರಿದಂತೆ ಕೆಲ ಕ್ಷೇತ್ರಗಳ ಸಮಗ್ರ ಅಭಿವೃದ್ಧಿಯ ಮೇಲಿನ ಗದಗ ಜಿಲ್ಲೆಯ ಜನರ ದಶಕಗಳ ನಿರೀಕ್ಷೆಯನ್ನು ರಾಜ್ಯ ಸರ್ಕಾರದ 2023-24ನೇ ಸಾಲಿನ ಬಜೆಟ್ ಹುಸಿಯಾಗಿಸಿದೆ. ಉತ್ತರ ಕರ್ನಾಟಕದ ಸಹ್ಯಾದ್ರಿ ಕಪ್ಪತಗುಡ್ಡ, ಲಕ್ಕುಂಡಿ, ಮಾಗಡಿ ಪಕ್ಷಿಧಾಮದ ಅಭಿವೃದ್ಧಿಯ ಬಗ್ಗೆ ಬಜೆಟ್‌ನಲ್ಲಿ ಪ್ರಸ್ತಾಪಿಸಿರುವುದು ಸ್ವಾಗತಾರ್ಹ. ಜಿಲ್ಲೆಯಲ್ಲಿರುವ ಇತರ ಪ್ರವಾಸಿ ತಾಣಗಳ ಸಮಗ್ರ ಅಭಿವೃದ್ಧಿಯ ಕುರಿತು ಪ್ರಸ್ತಾಪಿಸದಿರುವುದು ಸಹಜವಾಗಿ ಜಿಲ್ಲೆಯ ಜನರಲ್ಲಿ ನಿರಾಸೆ ಮೂಡಿಸಿದೆ. ಅಲ್ಲದೆ, ಈ ಹಿಂದಿನ ಬಿಜೆಪಿ ಸರ್ಕಾರದ ಉದ್ದೇಶಿತ ಜನಪರ ಯೋಜನೆಗಳನ್ನು ಕೈಬಿಟ್ಟಿರುವುದು ಖಂಡನಾರ್ಹ ಎಂದಿದ್ದಾರೆ.

## ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘದ ಜಿಲ್ಲಾ ಘಟಕದಿಂದ ಒತ್ತಾಯ

# ಹುತಾತ್ಮ ಯೋಧನ ಸ್ಮಾರಕ ಜಾಗೆಯನ್ನು ಅಭಿವೃದ್ಧಿಪಡಿಸಿ

■ ವಿಜಯಸಾಕ್ಷಿ ಸುದ್ದಿ, ಮುಂಡರಗಿ

2014ರಲ್ಲಿ ದೇಶಕ್ಕಾಗಿ ತಮ್ಮ ಪ್ರಾಣವನ್ನೇ ಬಲಿದಾನ ಮಾಡಿದ ಗದಗ ತಾಲೂಕಿನ ಕೋಟುಮಚಗಿ ಗ್ರಾಮದ ಹುತಾತ್ಮ ವೀರಯೋಧ ಬಸವರಾಜ ಅಂದಪ್ಪ ರಮಾಣಿರವರ ಸ್ಮಾರಕಕ್ಕೆ ನೀಡಿರುವ ಜಾಗೆಯಲ್ಲಿ ಅನಧಿಕೃತ ಕಟ್ಟಡಗಳು ತಲೆ ಎತ್ತುತ್ತಿದ್ದು, ಸಂಬಂಧಿಸಿದ ಗ್ರಾಮ ಪಂಚಾಯತಿ ಈ ಬಗ್ಗೆ ನಿರ್ಲಕ್ಷ್ಯ ವಹಿಸುತ್ತಿದೆ. ವೀರಯೋಧನ ಉದ್ಯಾನವನದಲ್ಲಿ ಸ್ಥಳೀಯರು ಹಾಕಿದ ಕಸ ಹಾಗೂ ದನದ ಶೆಡ್ಡನ್ನು ತೆರವುಗೊಳಿಸಿ, ವೀರಯೋಧನ ಸ್ಮಾರಕ ಮತ್ತು ಉದ್ಯಾನವನಕ್ಕೆ ಮೀಸಲಿಟ್ಟ ಸ್ಥಳದ ಗಣಕೀಕೃತ ಪಹಣಿಯನ್ನು ತಯಾರಿಸಿ, ಸ್ಮಾರಕ ಮತ್ತು ಉದ್ಯಾನವನವನ್ನು ಅಭಿವೃದ್ಧಿಪಡಿಸಬೇಕು ಎಂದು ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘದ ಗದಗ ಜಿಲ್ಲಾ ಘಟಕ ಒತ್ತಾಯಿಸಿದೆ.

ಈ ಕುರಿತು ಜಿಲ್ಲಾ ಪಂಚಾಯತ್ ಸಿಇಒ ಡಾ. ಸುಶೀಲಾ ಬಿ. ಅವರಿಗೆ ಮನವಿ ಸಲ್ಲಿಸಿ, 2014ರಲ್ಲಿ ಗ್ರಾಮದ ಗುರು-ಹಿರಿಯರೆಲ್ಲರೂ ಗ್ರಾಮದ ಗೌರವಕ್ಕಾಗಿ, ದೇಶಾಭಿಮಾನದಿಂದ



ಗ್ರಾಮ ಪಂಚಾಯತ್ ಅಧ್ಯಕ್ಷರು, ಸದಸ್ಯರು ಸೇರಿಕೊಂಡು ಗೌರವಗಳೊಂದಿಗೆ ಕೊಟುಮಚಗಿ ಗ್ರಾಮದ ಮುಖ್ಯ ಹೆದ್ದಾರಿಗೆ ಹೊಂದಿಕೊಂಡಿರುವ ಸರಕಾರಿ ಜಾಗೆಯಲ್ಲಿ ▶▶ 3ನೇ ಪುಟಕ್ಕೆ

## ನೀರಾವರಿ ಯೋಜನೆಗಳ ಬಗ್ಗೆ ನಿರೀಕ್ಷೆಯಿತ್ತು: ಶಾಸಕ ಲಮಾಣಿ



■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶುಕ್ರವಾರ ಮಂಡಿಸಿದ ಬಜೆಟ್‌ನಲ್ಲಿ ನನ್ನ ಮತಕ್ಷೇತ್ರ ವ್ಯಾಪ್ತಿಯಲ್ಲಿ ಪ್ರವಾಸೋದ್ಯಮ ಇಲಾಖೆ ವತಿಯಿಂದ ವಿದೇಶಿ ವಲಸೆ ಪಕ್ಷಿಗಳ ತಾಣವಾದ ಮಾಗಡಿ ಕೆರೆ ಹಾಗೂ ಕಪ್ಪತ್ತಗುಡ್ಡವನ್ನು ಪ್ರವಾಸಿ ತಾಣವನ್ನಾಗಿಸಲು ಮತ್ತು ಶಿರಹಟ್ಟಿ ಪಟ್ಟಣದಲ್ಲಿ ಅಗ್ನಿಶಾಮಕ ಠಾಣೆಗೆ ಕಟ್ಟಡ ನಿರ್ಮಾಣಕ್ಕೆ ಅನುದಾನ ಮೀಸಲಿರಿಸಿರುವುದು ಸ್ವಾಗತಾರ್ಹ ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದ್ದಾರೆ.

ಆದರೆ ಕ್ಷೇತ್ರದಲ್ಲಿ ಕೆಲವೇ ಕಿಮೀಗಳ ಅಂತರದಲ್ಲಿ ತುಂಗಭದ್ರಾ ನದಿ ಹಾದು ಹೋಗಿರುವದರಿಂದ, ಅನೇಕ ವರ್ಷಗಳಿಂದ ನೆನೆಗುದಿಗೆ ಬಿದ್ದಿರುವ ನೀರಾವರಿ ಯೋಜನೆಗಳಿಗೆ ಕಾಯಕಲ್ಪ ಸಿಗುವ ನಿರೀಕ್ಷೆ ಹೊಂದಲಾಗಿತ್ತು. ಒಂದು ಕಡೆ ಉಚಿತ ಯೋಜನೆಗಳನ್ನು ಕೊಟ್ಟು, ಇನ್ನೊಂದೆಡೆ ತೆರಿಗೆ ಹೆಚ್ಚಿಸುವ ಸರ್ಕಾರದ ಕ್ರಮ ಸರಿಯಲ್ಲ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

## ಉದ್ಯಾನವನದಲ್ಲಿ ಉದಯರಾಗ, ಸಂಧ್ಯಾರಾಗ ಕಾರ್ಯಕ್ರಮ

■ ವಿಜಯಸಾಕ್ಷಿ ಸುದ್ದಿ, ಗದಗ

ಉದ್ಯಾನವನದಲ್ಲಿ ಉದಯರಾಗ ಹಾಗೂ ಸಂಧ್ಯಾರಾಗ ಕಾರ್ಯಕ್ರಮದಲ್ಲಿ ಜುಲೈ 9ರಂದು ರವಿವಾರ ಬೆಳಿಗ್ಗೆ:6.30 ರಿಂದ 7.30 ರವರೆಗೆ ನಡೆಯುವ ಉದಯರಾಗ ಕಾರ್ಯಕ್ರಮದಲ್ಲಿ ರಾಜೀವಗಾಂಧಿ ನಗರದ ಶಿವಶರಣ ಶ್ರೀ ಹರಳಯ್ಯ ಉದ್ಯಾನವನದಲ್ಲಿ ಎಂ.ಜಿ. ಗುರುಸಿದ್ದೇಶ್ವರಶಾಸ್ತ್ರೀ ಬೇವೂರ ಅವರಿಂದ "ಸುಗಮ ಸಂಗೀತ", ವಿಶ್ವೇಶ್ವರಯ್ಯ ನಗರದ ವಿಶ್ವೇಶ್ವರಯ್ಯ ಉದ್ಯಾನವನದಲ್ಲಿ ಸಿದ್ದೇಶ್ವರಶಾಸ್ತ್ರೀ ತೆಲ್ಲೂರ ಇವರಿಂದ"ಕಥಾ ಕೀರ್ತನ", ಬೆಟಗೇರಿಯ ಕಿತ್ತೂರು ಚನ್ನಮ್ಮ ಉದ್ಯಾನವನದಲ್ಲಿ ಕು.ಪಾರ್ವತಿ ಬಬಲೇಶ್ವರ ಇವರಿಂದ "ಸುಗಮ ಸಂಗೀತ", ಸಾಯಂಕಾಲ: 5.30 ರಿಂದ 6.30 ಗಂಟೆಯವರೆಗೆ ಭೀಷ್ಮಕೆರೆಯ ಶ್ರೀ ಬಸವೇಶ್ವರ ಪುತ್ಥಳಿ ಆವರಣದಲ್ಲಿ ನಡೆಯುವ ಸಂಧ್ಯಾರಾಗ ಕಾರ್ಯಕ್ರಮದಲ್ಲಿ ವೀರಯ್ಯ ಹೊಸಮಠ ಇವರಿಂದ "ಗಾಯನ" ಕಾರ್ಯಕ್ರಮ ಏರ್ಪಡಿಸಲಾಗುವುದು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಬಕಾರಿ ಚೀಟಿ ಮುದ್ರಣ /ಸರಬರಾಜು ಕಾರ್ಯವನ್ನು ವಹಿಸುವಂತೆ ಕೆಎಸ್‌ಎಂಸಿಎ ಮನವಿ

# ಸಂಸ್ಥೆಯ ನೌಕರರನ್ನು ಬೀದಿಗೆ ತಳ್ಳಬೇಡಿ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಮದ್ಯದ ಬಾಟಲಿಗಳ ಮೇಲೆ ಅಂಟಿಸುವ ಅಬಕಾರಿ ಚೀಟಿಗಳ ಮುದ್ರಣ ಮತ್ತು ಸರಬರಾಜು ಪ್ರಕ್ರಿಯೆಯ ಮೇಲ್ವಿಚಾರಣೆಯ ಜವಾಬ್ದಾರಿಯನ್ನು ತನಗೆ ವಹಿಸುವಂತೆ ಕರ್ನಾಟಕ ಕಮ್ಯುನಿಕೇಷನ್ ಅಂಡ್ ಅಡ್ವರ್ಟೈಸಿಂಗ್ ಲಿಮಿಟೆಡ್ ರಾಜ್ಯ ಸರ್ಕಾರಕ್ಕೆ ಮನವಿ ಮಾಡಿದೆ.

ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯಡಿ ಕಾರ್ಯ ನಿರ್ವಹಿಸುತ್ತಿರುವ ಕೆಎಸ್‌ಎಂಸಿಎ ರಾಜ್ಯ ಸರ್ಕಾರದ ಅಧೀನ ಸಂಸ್ಥೆಯಾಗಿದ್ದು, ರಾಜ್ಯ ಸರ್ಕಾರವು 1990ರಲ್ಲಿ ಮದ್ಯದ ಬಾಟಲಿಗಳ ಮೇಲೆ ಅಬಕಾರಿ ಭದ್ರತಾ ಚೀಟಿ ಅಂಟಿಸುವ ನಿಯಮ ಜಾರಿಗೊಳಿಸಿದಾಗಿನಿಂದಲೂ ಸಂಸ್ಥೆಯು ಅಬಕಾರಿ ಇಲಾಖೆಗೆ ಅಬಕಾರಿ ಭದ್ರತಾ ಚೀಟಿ ಮುದ್ರಿಸಿ ಸರಬರಾಜು ಮಾಡುತ್ತಿದೆ.

ಸರಕಾರಿ ಸ್ವಾಮ್ಯದ ಕೆಎಸ್‌ಎಂಸಿಎಯನ್ನೇ ಅಬಕಾರಿ ಭದ್ರತಾ ಚೀಟಿ ಸರಬರಾಜು ನಿರ್ವಹಣಾ ಏಜೆನ್ಸಿಯಾಗಿ ಮುಂದುವರಿಸುವಂತೆ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವ ಎಂ ಬಿ ಪಾಟೀಲರು ಹಣಕಾಸು ಇಲಾಖೆಗೆ ಪತ್ರ ಬರೆದಿದ್ದಾರೆ. ಸಂಸ್ಥೆಯು ಕಳೆದ ಮೂರು ದಶಕಗಳಿಂದಲೂ ಅಬಕಾರಿ ಭದ್ರತಾ ಚೀಟಿ ಸರಬರಾಜು ಕಾರ್ಯವನ್ನು ಯಶಸ್ವಿಯಾಗಿ ನಿರ್ವಹಿಸಿದೆ. ಸಂಸ್ಥೆ ಮತ್ತು ಅದರ ನೌಕರರ ಹಿತದೃಷ್ಟಿಯಿಂದ ಅಬಕಾರಿ ಭದ್ರತಾ ಚೀಟಿ ಸರಬರಾಜು ಮತ್ತು ಮೇಲ್ವಿಚಾರಣೆಯ ಜವಾಬ್ದಾರಿಯನ್ನು ಕೆಎಸ್‌ಎಂಸಿಎಗೆ ವಹಿಸುವುದು ಸೂಕ್ತವೆಂದು ಪತ್ರದಲ್ಲಿ ತಿಳಿಸಿದ್ದಾರೆ.

ಅಬಕಾರಿ ಭದ್ರತಾ ಚೀಟಿ ಸರಬರಾಜಿಗೆ ಸಂಬಂಧಿಸಿದಂತೆ ಅಬಕಾರಿ ಇಲಾಖೆಯೊಂದಿಗೆ ಕೆಎಸ್‌ಎಂಸಿಎ ಮಾಡಿಕೊಂಡಿದ್ದ ಕರಾರು ಜೂನ್ 30ಕ್ಕೆ ಅಂತ್ಯಗೊಂಡಿದೆ. ಹೀಗಾಗಿ ಹಣಕಾಸು ಇಲಾಖೆಯ ನಿರ್ದೇಶನದ ಮೇರೆಗೆ ಅಬಕಾರಿ ಇಲಾಖೆಯು ಕರಾರು ನವೀಕರಣಕ್ಕೆ ನಿರಾಕರಿಸಿದ್ದು, ಅಬಕಾರಿ ಭದ್ರತಾ ಚೀಟಿ ಸರಬರಾಜು ಪ್ರಕ್ರಿಯೆ ಸ್ಥಗಿತಗೊಳಿಸುವಂತೆ ಸೂಚಿಸಿದೆ.

ಈ ಪ್ರಕ್ರಿಯೆಯಲ್ಲಿ ಯಾವುದೇ ಲೋಪವಾಗಿಲ್ಲವೆಂದು ಕೆಎಸ್‌ಎಂಸಿಎ ಅಧಿಕಾರಿಗಳು ಹೇಳಿದ್ದಾರೆ.

ಸಂಸ್ಥೆಯು ಅಬಕಾರಿ ಭದ್ರತಾ ಚೀಟಿ ಸರಬರಾಜು ಮೂಲಕ ವರ್ಷಕ್ಕೆ ಸುಮಾರು 152 ಕೋಟಿ ರೂ. ವಹಿವಾಟು ನಡೆಸುತ್ತಿದ್ದು, ಈ ಆದಾಯದಿಂದಲೇ ಸಂಸ್ಥೆಯ ನೌಕರರಿಗೆ ಸಂಬಳ ನೀಡಲಾಗುತ್ತಿತ್ತು. ಇದೀಗ ಅಬಕಾರಿ ಇಲಾಖೆಯು ಸರಕಾರದ ಸೂಚನೆಯಂತೆ ಭದ್ರತಾ ಚೀಟಿ ಮುದ್ರಣದ ಟೆಂಡರನ್ನು ಬೇರೊಂದು ಖಾಸಗಿ ಸಂಸ್ಥೆಗೆ ನೀಡಿದೆ. ಇದರಿಂದ ಸಂಸ್ಥೆಯ ಆದಾಯ ಕಡಿಮೆ ಆಗಲಿದೆ ಮತ್ತು ಸಂಸ್ಥೆಯ ನೌಕರರು ಬೀದಿಗೆ ಬೀಳಲಿದ್ದಾರೆ ಎಂದು ಅಧಿಕಾರಿಗಳು ಆತಂಕ ವ್ಯಕ್ತಪಡಿಸಿದ್ದಾರೆ.

## ಸಾಕ್ಷಿ ಸುಭಾಷಿತ

ಬಡವರಿಗಿರುವ ಸೌಲಭ್ಯವೇ
ನಾಗರಿಕತೆಯ ಅಳತೆಗೋಲು

–ಡಾ. ಜಾನ್‌ಸನ್

## ಸಂಪಾದಕೀಯ

### ಸಮಗ್ರತೆಯ ವ್ಯಾಖ್ಯಾನ, ಸ್ಪಷ್ಟತೆಯ ಕೊರತೆ

16ನೆ ವಿಧಾನಮಂಡಲದ ಮೊದಲ ಬಜೆಟ್ ಅಧಿವೇಶನದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ 3.27 ಕೋಟಿ ರೂ. ಗಾತ್ರದ ಬಜೆಟ್ ಮಂಡಿಸಿ ದಾಖಲೆ ನಿರ್ಮಿಸಿದ್ದಾರೆ. ಒಟ್ಟು 14 ಬಾರಿ ಬಜೆಟ್ ಮಂಡಿಸಿದ ಕೀರ್ತಿಗೂ ಸಿದ್ದರಾಮಯ್ಯ ಪಾತ್ರರಾಗಿದ್ದಾರೆ. ಕಾಂಗ್ರೆಸ್ ಚುನಾವಣೆ ಪೂರ್ವ ನೀಡಿದ ಐದು ಗ್ಯಾರಂಟಿಗಳ ಅನುಷ್ಠಾನದ ಕುರಿತು ಟೀಕೆ ಟಿಪ್ಪಣಿಗಳಿಗೆ ಉತ್ತರ ನೀಡುವ ಜೊತೆಗೆ ಅದರ ಸಾಧಕ ಬಾಧಕಗಳು ಕುರಿತು ಸಿದ್ದರಾಮಯ್ಯ ಮಾತಾಡಿದ್ದಾರೆ. ಬಜೆಟ್ ಮಂಡನೆಯುದ್ದಕ್ಕೂ ಬಿಜೆಪಿ ನಾಯಕರನ್ನು ಟೀಕಿಸುತ್ತಲೆ ಆಯವ್ಯಯ ಮಂಡಿಸಿ ಗಮನ ಸೆಳೆದಿದ್ದಾರೆ. ವಿಶೇಷವಾಗಿ ಕೃಷಿ ವಲಯದ ಕಾರ್ಯಕ್ರಮಗಳು ರೈತರ ಕಲ್ಯಾಣಕ್ಕೆ ಕಾರಣವಾಗಲಿದೆ.

ಸಿದ್ದರಾಮಯ್ಯ ತಮ್ಮ 14ನೆ ಬಜೆಟ್ ನಲ್ಲಿ ಸರ್ವವ್ಯಾಪಿ ಮತ್ತು ಸರ್ವಸ್ಪರ್ಶಿಯಾಗಿದ್ದಾರೆ. ಎಲ್ಲ ವರ್ಗ, ವಯೋಮಾನ ಮತ್ತು ಎಲ್ಲ ಕ್ಷೇತ್ರಗಳನ್ನೂ ಬಜೆಟ್ ಒಳಗೊಂಡಿದೆ. ಒಟ್ಟಾರೆ ಇದೊಂದು ಸಮಗ್ರ ಬಜೆಟ್ ಆಗಿದ್ದರು ಸ್ಪಷ್ಟತೆ ಇಲ್ಲದ ಬಜೆಟ್ ಆಗಿದೆ. ಹಲವಾರು ಘೋಷಿತ ಕಾರ್ಯಕ್ರಮಗಳಿಗೆ ಕಾಲಮಿತಿಯಲ್ಲಿ ಮಾರ್ಗಸೂಚಿ ಮಾಡುವುದು ಕಷ್ಟಸಾಧ್ಯವಾಗಲಿದೆ. ಹೀಗಾಗಿ ಇದೊಂದು ಸ್ಪಷ್ಟತೆ ಇಲ್ಲದ ಬಜೆಟ್ ಎನಿಸಿಕೊಂಡಿದೆ.

ಇದೆಲ್ಲದಕ್ಕಿಂತ ಮುಖ್ಯವಾಗಿ ಇದೊಂದು ಗುತ್ತಿಗೆದಾರರ ಸ್ನೇಹಿ ಅಥವಾ ಗುತ್ತಿಗೆದಾರರ ಪರ ಬಜೆಟ್ ಎನ್ನಬಹುದು. 1 ಕೋಟಿ ರೂ. ವರೆಗಿನ ಕಾಮಗಾರಿಗಳಿಗೆ ಹಿಂದುಳಿದ ವರ್ಗದ ಗುತ್ತಿಗೆದಾರರಿಗೂ ಮೀಸಲಾತಿ ಕಲ್ಪಿಸುವ ನಿರ್ಣಯ ಮಾತ್ರವಲ್ಲದೇ, ನೂರಾರು ಕಾಮಗಾರಿಗಳ ಅನುಷ್ಠಾನಕ್ಕೆ ಆಯವ್ಯಯದಲ್ಲಿ ಅವಕಾಶ ನೀಡಲಾಗಿದೆ. ಹೈಟೆಕ್ ಹಾರ್ವೆಸ್ಟರ್ ಹಬ್ ನಿರ್ಮಾಣಕ್ಕೆ 50 ಕೋಟಿ, ಹೈಟೆಕ್ ರೇಷ್ಮೆ ಮಾರುಕಟ್ಟೆ ನಿರ್ಮಾಣಕ್ಕೆ 75 ಕೋಟಿ, ಶಾಲೆಗಳಲ್ಲಿ ಶೌಚಾಲಯ ನಿರ್ಮಾಣಕ್ಕೆ 200 ಕೋಟಿ, ವೈದ್ಯಕೀಯ ಕಾಲೇಜು ಸ್ಥಾಪನೆ, ಭಾಷಾ ಪ್ರಯೋಗಾಲಯ ಹೀಗೆ ನೂರಾರು ಕೆಲಸಗಳು ಗುತ್ತಿಗೆದಾರರಿಗೆ ಲಭ್ಯವಾಗಲಿರುವುದು ಗುತ್ತಿಗೆದಾರರ ಸಂಭ್ರಮಕ್ಕೆ ಕಾರಣವಾಗಿದೆ.

ರಾಜ್ಯ ಕಾಂಗ್ರೆಸ್ ಸರಕಾರ ಕಟ್ಟಡ ನಿರ್ಮಾಣವನ್ನೆ ಅಭಿವೃದ್ಧಿಯ ಸಂಕೇತ ಎಂದು ಭಾವಿಸಿದಂತಿದೆ. ಈ ಹಿಂದಿನ ಎಲ್ಲಾ ಸರಕಾರಗಳು ಮಾಡಿದ್ದು ಇದನ್ನೆ. ಆ ಪರಂಪರೆಯನ್ನು ಸಿದ್ದರಾಮಯ್ಯ ಮುಂದುವರಿಸಿದ್ದಾರೆ. ಕೃಷಿಯಿಂದ ಕೈಗಾರಿಕೆ ವರೆಗೆ ಎಲ್ಲ ವಲಯಗಳನ್ನು ಸಿದ್ದರಾಮಯ್ಯ ತಲುಪಿದ್ದಾರೆ. ಮಠ-ಮಂದಿರಗಳಿಗೆ ಅನುದಾನ ನೀಡದೆ, ಆಯಾ ಸಮುದಾಯದ ಅಭಿವೃದ್ಧಿ ನಿಗಮಗಳಿಗೆ ಹಣ ಮೀಸಲಿಟ್ಟಿದ್ದಾರೆ. ಆಯವ್ಯಯದಲ್ಲಿ ಸಮಗ್ರತೆ ಕಾಯ್ದುಕೊಂಡಿದ್ದಾರೆ. ಆದರೆ ಸ್ಪಷ್ಟತೆ ಇಲ್ಲವಾಗಿದೆ. ಬಜೆಟ್ ಹಲವಾರು ಘೋಷಿತ ಕಾರ್ಯಕ್ರಮಗಳಲ್ಲಿ ಆದ್ಯತೆ, ಕ್ರಮ ಕೈಗೊಳ್ಳಲಾಗುವುದು ಎನ್ನುವುದನ್ನು ಉಲ್ಲೇಖಿಸಿದ್ದಾರೆ. ಆದರೆ ಅವು ಯಾವವೂ ಜಾರಿಯಾಗುವುದಿಲ್ಲ ಎನ್ನುವುದು ಎಲ್ಲರಿಗೂ ಗೊತ್ತು. ಉದಾಹರಣೆಗೆ ಬಾಕಿ ಉಳಿದ ನೀರಾವರಿಯನ್ನು ಪೂರ್ಣಗೊಳಿಸಲು ಆದ್ಯತೆ ನೀಡಲಾಗುವುದು ಎಂದು ಬಜೆಟ್ ನಲ್ಲಿ ಘೋಷಣೆ ಮಾಡಿದರೂ ವಾಸ್ತವದಲ್ಲಿ ಆ ಯೋಜನೆ ಪೂರ್ಣಗೊಳ್ಳುವುದಿಲ್ಲ. ಆದರೆ ಬಜೆಟ್ ಘೋಷಣೆಯನ್ನು ಮಾತ್ರ ರಾಜಕೀಯ ಅಸ್ತ್ರವಾಗಿ ಬಳಕೆ ಮಾಡಿಕೊಳ್ಳುವುದನ್ನು ಮಾತ್ರ ಮರೆಯುವುದಿಲ್ಲ.

ಒಟ್ಟಾರೆ ಸಿದ್ದರಾಮಯ್ಯ ಮಂಡಿಸಿದ ಬಜೆಟ್ ಗ್ಯಾರಂಟಿ ಯೋಜನೆಗೆ ಬದ್ಧವಾಗಿದ್ದು, ಅದಕ್ಕೆ ಪೂರಕವಾಗುವ ಸುಸ್ಥಿರ ಅಭಿವೃದ್ಧಿಗೆ ಆದ್ಯತೆ ನೀಡಿದ್ದಾರೆ. ಕೃಷಿ ಮತ್ತು ಸೇವಾ ವಲಯಕ್ಕೆ ಹೆಚ್ಚಿನ ಆದ್ಯತೆ ನೀಡಿರುವುದರಿಂದ ಬಡ ಮತ್ತು ಮಧ್ಯಮ ವರ್ಗದ ಜನರಿಗೆ ಅನುಕೂಲ ಆಗಲಿದೆ. ಆದರೆ ಕಾಲಮಿತಿಯಲ್ಲಿ ಬಜೆಟ್ ಕಾರ್ಯಕ್ರಮ ಅನುಷ್ಠಾನಗೊಂಡಾಗ ಮಾತ್ರ ಎನ್ನುವುದು ಮರೆಯಬಾರದು.



ಲಕ್ಷ್ಮೇಶ್ವರದ ಶ್ರೀ ಅಂಬಾಭವಾನಿ ದೇವಿ ದೇವಸ್ಥಾನದಲ್ಲಿ ಆಷಾಢ ಮಾಸದ ಶುಕ್ರವಾರದ ಪ್ರಯುಕ್ತ ದೇವಿ ಮೂರ್ತಿಗೆ ವಿಶೇಷ ಅರಿಶಿಣ ಅಲಂಕಾರ ಪೂಜೆ ನೆರವೇರಿಸಲಾಯಿತು.

## ರಾಜ್ಯ ಮಟ್ಟದ ಕವಿಗೋಷ್ಠಿಗೆ ಜುಲೇಖಾ ಅಸ್ಲಂ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಖಿದ್ಮಾ ಫೌಂಡೇಶನ್ ಕರ್ನಾಟಕ ಅವರು ನಾಳೆ ಜುಲೈ 09-07-2023ರಂದು ಬೆಂಗಳೂರಿನಲ್ಲಿ ಹಮ್ಮಿಕೊಂಡಿರುವ ರಾಜ್ಯಮಟ್ಟದ ಕವಿಗೋಷ್ಠಿಯಲ್ಲಿ ಗದಗ ತಾಲೂಕಿನ ಲಕ್ಕುಂಡಿ ಗ್ರಾಮದ ಶಿಕ್ಷಕಿ ಶ್ರೀಮತಿ ಜುಲೇಖಾ ಅಸ್ಲಂ ಪಟವಾರಿ ಭಾಗವಹಿಸಲಿದ್ದಾರೆ.



ಜುಲೇಖಾ ಅವರು ಜುಲೈ 9ರಂದು ಬೆಂಗಳೂರಿನ ಕನ್ನಡ ಸಾಹಿತ್ಯ ಪರಿಷತ್ತಿನಲ್ಲಿ ನಡೆಯುವ ಕವಿಗೋಷ್ಠಿಯಲ್ಲಿ ಕವನ ವಾಚನ ಮಾಡಲಿದ್ದಾರೆ ಎಂದು ಖಿದ್ಮಾ ಫೌಂಡೇಶನ್ ಕರ್ನಾಟಕದ ಆಯೋಜಕರು, ರಾಜ್ಯ ಸಂಚಾಲಕ ಆಮಿರ್ ಬನ್ನೂರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಮುಖ್ಯಮಂತ್ರಿ ಸಿದ್ಧರಾಮಯ್ಯನವರು 5 ಗ್ಯಾರಂಟಿ ಯೋಜನೆಗಳಿಗೆ ಸಂಪನ್ಮೂಲ ಕ್ರೋಢೀಕರಿಸುವ ಒತ್ತಡದ ನಡುವೆಯೂ ದಾಖಲೆಯ 14ನೇ ಬಾರಿ ಬಜೆಟ್ ಮಂಡಿಸಿರುವ ಹಿನ್ನೆಲೆಯಲ್ಲಿ ಶುಕ್ರವಾರ ಲಕ್ಷ್ಮೇಶ್ವರದಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಸಿದ್ಧರಾಮಯ್ಯನವರ ಭಾವಚಿತ್ರಕ್ಕೆ ಹೂಮಾಲೆ ಹಾಕಿ ಸಂಭ್ರಮಿಸಿದರು. ಈ ವೇಳೆ ನಗರ ಘಟಕದ ಅಧ್ಯಕ್ಷ ಅಂಬರೇಶ ತೆಂಬದಮನಿ, ತಿಪ್ಪಣ್ಣ ಸಂಶಿ, ಅಣ್ಣಪ್ಪ ರಾಮಗೇರಿ, ಮುದಕಪ್ಪ ಗದ್ದಿ, ಕಿರಣ ನವಲೆ, ಪರಮೇಶ ಲಮಾಣಿ, ಬಸವರಾಜ ಹಿರೇಮನಿ, ಪ್ರಕಾಶ ಕೊಂಚಿಗೇರಿಮಠ, ಗಂಗಾಧರ ಮ್ಯಾಗೇರಿ, ಸದಾನಂದ ನಂದೆಣ್ಣವರ, ಅಬ್ಜಲ್ ರಿತ್ತಿ, ನೀಲಪ್ಪ ಶರಸೂರಿ ಮುಂತಾದವರಿದ್ದರು.

**ಉಚಿತ ಆರೋಗ್ಯ ತಪಾಸಣಾ ಶಿಬಿರ ಏರ್ಪಡಿಸಿ ಜನ್ಮದಿನ ಆಚರಿಸಿದ ಗವಿಮಠದ ಶ್ರೀ ಕುಮಾರ ಮಹಾರಾಜರು**

# ನಾವು ಮಾಡಿದ ಶ್ರೇಷ್ಠ ಕಾರ್ಯಗಳು ಮಾತ್ರ ಜೀವಂತವಾಗಿರುತ್ತವೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಬಂಜಾರ ಸಮಾಜದ ಕುಲಗುರು ಡಾ. ರಾಮರಾವ್ ಮಹಾರಾಜರ ಜನ್ಮದಿನದಂದೇ ತಮ್ಮ ಜನ್ಮದಿನವೂ ಇರುವ ಪ್ರಯುಕ್ತ, ತಾಲೂಕಿನ ಆದ್ರಳ್ಳಿ ಗವಿಮಠದ ಶ್ರೀ ಕುಮಾರ ಮಹಾರಾಜರು ಶುಕ್ರವಾರ ಶ್ರೀಮಠದ ಆವರಣದಲ್ಲಿ ಬೆಂಗಳೂರಿನ ಸಪ್ತಗಿರಿ ಆಸ್ಪತ್ರೆಯ ಸಹಯೋಗದಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರ ನಡೆಸಿ ಅರ್ಥಪೂರ್ಣ ಜನ್ಮದಿನವನ್ನು ಆಚರಿಸಿದರು.

ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಉದ್ಘಾಟಿಸಿ ಆಶೀರ್ವಚನ ನೀಡಿದ ಹತ್ತಿಮತ್ತೂರಿನ ಶ್ರೀ ನಿಜಗುಣಾನಂದ ಸ್ವಾಮಿಗಳು, ಎಲ್ಲ ಸೇವೆಗಳಿಗಿಂತ ಆರೋಗ್ಯ ಸೇವೆ ಅತ್ಯಮೂಲ್ಯವಾಗಿದೆ. ವೈದ್ಯಕೀಯ ಚಿಕಿತ್ಸೆ ಅತ್ಯಂತ ದುಬಾರಿಯಾಗಿರುವ ಇಂದಿನ ದಿನಗಳಲ್ಲಿ ಇಂತಹ ಉಚಿತ ಆರೋಗ್ಯ ಶಿಬಿರಗಳು ಅದರಲ್ಲೂ ಗ್ರಾಮೀಣ ಭಾಗದಲ್ಲಿ ನಡೆಸುವುದು ಅತ್ಯಂತ ಉಪಯುಕ್ತ. ಇತ್ತೀಚಿನ ದಿನಗಳಲ್ಲಿ ಜನ್ಮದಿನಾಚರಣೆಯು ಅರ್ಥವನ್ನೇ ಕಳೆದುಕೊಳ್ಳುತ್ತಿದ್ದು, ಅಸಂಬದ್ಧ ಮತ್ತು ದುಂದುವೆಚ್ಚದ ರೀತಿಯಲ್ಲಿ ಜನ್ಮದಿನವನ್ನು ಆಚರಿಸುತ್ತಿದ್ದಾರೆ. ಅನೇಕ ಸಂಘ-ಸಂಸ್ಥೆಗಳು, ಮಠ-ಮಂದಿರಗಳು ಬಡಜನರಿಗೆ ಉಪಯೋಗವಾಲಿ ಎನ್ನುವ ದೃಷ್ಟಿಯಿಂದ ಇಂತಹ ಉಚಿತ ಆರೋಗ್ಯ ಶಿಬಿರಗಳನ್ನು ಸಂಘಟಿಸುತ್ತಿರುವದು ಸಮಾಜಕ್ಕೆ ಮಾದರಿಯಾಗಿದೆ ಎಂದರು.



> ಹುಟ್ಟು ಆಕಸ್ಮಿಕ, ಸಾವು ನಿಶ್ಚಿತ. ಇವೆರಡರ ನಡುವಿನ ಬದುಕಿನಲ್ಲಿ ನಾವು ಮಾಡಿದ ಶ್ರೇಷ್ಠ ಕಾರ್ಯಗಳು ಮಾತ್ರ ಜೀವಂತವಾಗಿರುತ್ತವೆ ಎಂಬ ಅರಿವು ಎಲ್ಲರದ್ದಾಗಬೇಕು. ಶ್ರೀಮಠದಿಂದ ಧರ್ಮಜಾಗೃತಿಯೊಂದಿಗೆ ಶಿಕ್ಷಣ, ಗೋಸೇವೆ ಇನ್ನೂ ಅನೇಕ ಸಮಾಜಮುಖಿ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗುವುದು.
>
> **– ಶ್ರೀ ಕುಮಾರ ಮಹಾರಾಜರು.**
> ಆದ್ರಳ್ಳಿ, ಗವಿಮಠ.

ಶ್ರೀಮಠದ ಶ್ರೀ ಕುಮಾರ ಮಹಾರಾಜರು ಮಾತನಾಡಿ, ಜನ್ಮದಿನಾಚರಣೆ ನೆಪ ಮಾತ್ರ. ಕಾರ್ಯಕ್ರಮದ ಅಂಗವಾಗಿ ಸಮಾಜೋಪಯೋಗಿ ಕಾರ್ಯಗಳನ್ನು ನಡೆಸಲು ಹಾಗೂ ಆರೋಗ್ಯ ಸೇವೆ ಕಲ್ಪಿಸುವ ಉದ್ದೇಶ ಹೊಂದಲಾಗಿದೆ. ತಮ್ಮ ಈ ಕಾರ್ಯಕ್ಕೆ ಬೆಂಗಳೂರಿನ ಸಪ್ತಗಿರಿ ಆಸ್ಪತ್ರೆಯ ವೈದ್ಯ ಸಿಬ್ಬಂದಿಗಳು ಸಹಾಯ-ಸಹಕಾರ ನೀಡಿದ್ದು ಅಭಿನಂದನನೀಯ ಎಂದರು.


ಬೆಂಗಳೂರಿನ ಸಪ್ತಗಿರಿ ಆಸ್ಪತ್ರೆಯ ವೈದ್ಯರಾದ ಸಚಿನ್, ರಕ್ಷಿತ, ಪ್ರಿಯದರ್ಶಿನಿ, ಹನಮಂತಯ್ಯ ಅವರ ತಂಡ 200ಕ್ಕೂ ಹೆಚ್ಚು ರೋಗಿಗಳನ್ನು ತಪಾಸಣೆ ನಡೆಸಿ, ಔಷಧಿಗಳನ್ನು ವಿತರಿಸಿದರು. ಶಿವಮೊಗ್ಗ ಗ್ರಾಮಾಂತರ ಶಾಸಕರ ಪುತ್ರ ದೀಪಕ ನಾಯ್ಕ, ಬಂಜಾರ ವಿದ್ಯಾರ್ಥಿ ಸಂಘದ ಅಧ್ಯಕ್ಷ ಗಿರೀಶ್ ಡಿ ಆರ್, ನಾಗಪ್ಪ ಲಮಾಣಿ, ಚಂದ್ರಕಾಂತ ಲಮಾಣಿ, ಕಾಶಿನಾಥ ಲಮಾಣಿ, ಕುಮಾರ್ ನಾಯ್ಕ, ಚನ್ನಪ್ಪ ಲಮಾಣಿ, ಬಸವರಾಜ ವಡ್ಡರ, ರಾಮಣ್ಣ ವಡ್ಡರ, ಅಲ್ಲಾಭಕ್ಷ ವಾಲಿಕಾರ, ಶಾರವ್ವ ಲಮಾಣಿ, ಮಂಗಲವ್ವ ಲಮಾಣಿ, ಆದ್ರಳ್ಳಿ, ನಾದಿಗಟ್ಟಿ, ಕೃಷ್ಣಾಪುರ ಮತ್ತು ಸುತ್ತಮುತ್ತಲಿನ ಗ್ರಾಮದ ಭಕ್ತಾದಿಗಳು ಪಾಲ್ಗೊಂಡಿದ್ದರು.

## ಮಾನಹಾನಿ ಪ್ರಕರಣ : ರಾಹುಲ್ ಗಾಂಧಿಗೆ ಹಿನ್ನಡೆ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಮೋದಿ ಉಪನಾಮದ ಹೇಳಿಕೆಗೆ ಸಂಬಂಧಿಸಿದಂತೆ ಕ್ರಿಮಿನಲ್ ಮಾನನಷ್ಟ ಮೊಕದ್ದಮೆಯಲ್ಲಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರ ಶಿಕ್ಷೆಗೆ ತಡೆ ನೀಡಲು ಗುಜರಾತ್ ಹೈಕೋರ್ಟ್ ಶುಕ್ರವಾರ ನಿರಾಕರಿಸಿದೆ. ನ್ಯಾಯಮೂರ್ತಿ ಹೇಮಂತ್ ಪ್ರಚ್ಚಕ್ ಅವರಿದ್ದ ನ್ಯಾಯಾಲಯ ಈ ತೀರ್ಪು ನೀಡಿದೆ.

ಮಾನಹಾನಿ ಪ್ರಕರಣದಲ್ಲಿ ಶಿಕ್ಷೆಯನ್ನು ಅಮಾನತುಗೊಳಿಸುವಂತೆ ರಾಹುಲ್ ಗಾಂಧಿ ಸಲ್ಲಿಸಿದ್ದ ಮರುಪರಿಶೀಲನಾ ಅರ್ಜಿ ವಜಾಗೊಳಿಸಿದ ಗುಜರಾತ್ ಹೈಕೋರ್ಟ್ ಮಧ್ಯ ಪ್ರವೇಶಿಸುವ ಅಗತ್ಯವಿಲ್ಲ ಎಂದು ಹೇಳಿದೆ, ಈ ಮೂಲಕ ರಾಹುಲ್ ಗಾಂಧಿಗೆ ಹಿನ್ನಡೆಯಾಗಿದೆ.



ಮಾನಹಾನಿ ಪ್ರಕರಣದಲ್ಲಿ ರಾಹುಲ್ ಗಾಂಧಿಗೆ ಎರಡು ವರ್ಷಗಳ ಜೈಲು ಶಿಕ್ಷೆ ವಿಧಿಸಲಾಗಿದೆ. ನ್ಯಾಯಮೂರ್ತಿ ಹೇಮಂತ್ ಪ್ರಚ್ಚಕ್ ಅವರು ಎಪ್ರಿಲ್ ಮತ್ತು ಮೇನಲ್ಲಿ ಅರ್ಜಿಯನ್ನು ಆಲಿಸಿದ್ದರು ಹಾಗೂ ಮೇ 2 ರಂದು ವಾದವನ್ನು ಮುಕ್ತಾಯಗೊಳಿಸಲಾಯಿತು. ರಾಹುಲ್ ಗಾಂಧಿ ಪರ ವಾದಿಸಿದ ಹಿರಿಯ ವಕೀಲ ಅಭಿಷೇಕ್ ಮನು ಸಿಂಘ್ವಿ, , ಕ್ರಿಮಿನಲ್ ಮಾನನಷ್ಟದ ಆರೋಪದ ಪ್ರಕರಣದಲ್ಲಿ ಶಿಕ್ಷೆಗೆ ತಡೆಯಾಜ್ಞೆ ನೀಡುವಂತೆ ಮನವಿ ಮಾಡಿದರು.

'ಮೋದಿ ಉಪನಾಮ ಹೊಂದಿರುವವರೆಲ್ಲರೂ ಕಳ್ಳರು' ಎಂದಿದ್ದ ಕ್ರಿಮಿನಲ್ ಮಾನಹಾನಿ ಪ್ರಕರಣದಲ್ಲಿನ ಶಿಕ್ಷೆಗೆ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ತಡೆ ಕೋರಿ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ಗುಜರಾತ್ ಹೈಕೋರ್ಟ್ ಈ ತೀರ್ಪು ನೀಡಿದೆ.

ಮಾರ್ಚ್‌ನಲ್ಲಿ ಸೂರತ್‌ನ ಮ್ಯಾಜಿಸ್ಟ್ರೇಟ್ ನ್ಯಾಯಾಲಯ ಈ ಪ್ರಕರಣದಲ್ಲಿ ರಾಹುಲ್ ಗಾಂಧಿ ದೋಷಿ ಎಂದು ಆದೇಶ ನೀಡಿತ್ತು. ಐಪಿಸಿ 499, 500ರಡಿ ಎರಡು ವರ್ಷ ಜೈಲು ಶಿಕ್ಷೆಯನ್ನು ವಿಧಿಸಿತ್ತು. ಶಿಕ್ಷೆ ಪ್ರಕಟಗೊಂಡ ಮರುದಿನವೇ, ಲೋಕಸಭೆಯ ಸ್ಪೀಕರ್ ಕಾರ್ಯಾಲಯ ಸಂಸದ ಸ್ಥಾನದಿಂದ ಅನರ್ಹಗೊಳಿಸಿತ್ತು.

## ನಮ್ಮ ಭರವಸೆಗಳು ಬಿಜೆಪಿ ಸರ್ಕಾರಕ್ಕಿಂತ ಭಿನ್ನ: ಸಿಎಂ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ನಾನು ಪೂರ್ಣ ಪ್ರಮಾಣದ 3,27,747 ಕೋಟಿ ರೂಪಾಯಿ ಗಾತ್ರದ ಬಜೆಟ್ ಮಂಡಿಸಿದ್ದೇನೆ. ಇದು ನಮ್ಮ ಗ್ಯಾರಂಟಿ ಬಜೆಟ್. ನಾವು ಕೊಟ್ಟ ಮಾತಿನಂತೆ 5 ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡುತ್ತಿದ್ದೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶುಕ್ರವಾರ ಹೇಳಿದ್ದಾರೆ.

ಇಂದು ವಿಧಾನಸಭೆಯಲ್ಲಿ 2023-24ನೇ ಸಾಲಿನ ಬಜೆಟ್ ಮಂಡಿಸಿದ ಬಳಿಕ ಸುದ್ದಿಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಸಿಎಂ, ನಮ್ಮದು ನುಡಿದಂತೆ ನಡೆದ ಸರ್ಕಾರ. ನಾವು ಕೊಟ್ಟ ಮಾತಿನಂತೆ 5 ಗ್ಯಾರಂಟಿ ಜಾರಿ ಮಾಡುತ್ತಿದ್ದೇವೆ ಎಂದರು.

ಬಜೆಟ್‌ನಲ್ಲೂ 5 ಗ್ಯಾರಂಟಿ ಯೋಜನೆಗಳಿಗೆ ಹಣ ಒದಗಿಸಿದ್ದೇವೆ.



ರಾಜ್ಯ ಆರ್ಥಿಕವಾಗಿ ದಿವಾಳಿ ಆಗದಂತೆ ನೋಡಿಕೊಂಡಿದ್ದೇವೆ. 1.30 ಕೋಟಿ ಕುಟುಂಬದ ಯಜಮಾನಿಗೆ 'ಗೃಹಲಕ್ಷ್ಮೀ' ಹಣ ನೀಡುತ್ತೇವೆ. ಜುಲೈ 16ರಿಂದ ಗೃಹಲಕ್ಷ್ಮೀ ಯೋಜನೆಗೆ ನೋಂದಣಿ ಪ್ರಾರಂಭವಾಗಲಿದೆ. ಆಗಸ್ಟ್‌ನಿಂದ ಮನೆ ಯಜಮಾನಿ ಖಾತೆಗೆ 2 ಸಾವಿರ ರೂ. ಹಾಕುತ್ತೇವೆ. ಆಗಸ್ಟ್ 15 ಅಥವಾ 16ರಂದು ಮನೆ ಯಜಮಾನಿ ಖಾತೆಗೆ ಹಣ ಹಾಕಲಾಗುವುದು ಎಂದರು.

ನಮ್ಮ ಭರವಸೆಗಳು ಈ ಹಿಂದಿನ ಬಿಜೆಪಿ ಸರ್ಕಾರಕ್ಕಿಂತ ಭಿನ್ನವಾಗಿವೆ. ಅವರು ಬಡವರಿಗೆ ನೀಡುತ್ತಿದ್ದ ಏಳು ಕೆಜಿ ಅಕ್ಕಿಯನ್ನು 5 ಕೆಜಿಗೆ ಇಳಿಸಿದ್ದರು. ಹೀಗಾಗಿ ನಾವು 10 ಕೆಜಿ ಉಚಿತ ನೀಡುವುದಾಗಿ ನಮ್ಮ ಪ್ರಣಾಳಿಕೆಯಲ್ಲಿ ಘೋಷಿಸಿದ್ದೇವು. ಐದು ಗ್ಯಾರಂಟಿ ಯೋಜನೆಗಳಿಂದ ರಾಜ್ಯ ಸರ್ಕಾರಕ್ಕೆ ವರ್ಷಕ್ಕೆ 52 ಸಾವಿರ ಕೋಟಿ ರೂಪಾಯಿ ಹೆಚ್ಚುವರಿ ಹೊರೆಯಾಗಲಿದೆ. ಆದರೆ ಈ ಗ್ಯಾರಂಟಿ ಯೋಜನೆಗಳಿಂದ 1.3 ಕೋಟಿ ಕುಟುಂಬಗಳಿಗೆ ಲಾಭವಾಗಲಿದೆ ಎಂದರು. ಸಾಲ ಜಿಡಿಪಿಯ ಶೇ. 25ರ ಒಳಗೆ ಇರಬೇಕು. ಆದರೆ ನಮ್ಮ ರಾಜ್ಯ ಸರ್ಕಾರದ ಸಾಲ ಶೇ. 23 ಇದೆ ಎಂದು ಸಿಎಂ ಸಿದ್ದರಾಮಯ್ಯ ಅವರು ವಿವರಿಸಿದ್ದಾರೆ.

## ತಡ ರಾತ್ರಿ ಫಡ್ನವೀಸ್-ಶಿಂಧೆ ಸಭೆ; ಡಿಸಿಎಂ ಅಜಿತ್ ಪವಾರ್ ಗೈರು!

■ವಿಜಯಸಾಕ್ಷಿ ಸುದ್ದಿ, ಮುಂಬೈ

ಎನ್ ಸಿಪಿಯಲ್ಲಿನ ಬಿರುಕು ಮುಂದುವರೆದಿರುವ ನಡುವೆ ಜು.06 ರಂದು ತಡರಾತ್ರಿ ಮಹಾರಾಷ್ಟದಲ್ಲಿ ಮತ್ತೊಂದು ಮಹತ್ವದ ಬೆಳವಣಿಗೆಯಾಗಿದೆ. ಸಿಎಂ ಏಕನಾಥ್ ಶಿಂಧೆ- ಡಿಸಿಎಂ ದೇವೇಂದ್ರ ಫಡ್ನವಿಸ್ ಸಿಎಂ ಗೃಹ ಕಚೇರಿಯಲ್ಲಿ ತಡರಾತ್ರಿ ಸಭೆ ನಡೆಸಿದ್ದಾರೆ.

ಈ ಬೆಳವಣಿಗೆಗೂ ಮುನ್ನ, ಎನ್ ಸಿಪಿ ನಾಯಕ ಅಜಿತ್ ಪವಾರ್ ಶಿಂಧೆ-ಫಡ್ನವಿಸ್ ಸರ್ಕಾರವನ್ನು ಸೇರಿರುವುದರ ಬಗ್ಗೆ ಶಿವಸೇನೆ ಶಾಸಕರಲ್ಲಿ ಅಸಮಾಧಾನವಿದೆ ಎಂಬ ಮಾಧ್ಯಮಗಳ ವರದಿಯ ಬಗ್ಗೆ ಪ್ರತಿಕ್ರಿಯೆ ನೀಡಿದ್ದ ಸಿಎಂ ಶಿಂಧೆ, ಈ ಸರ್ಕಾರ ಮತ್ತಷ್ಟು ಸದೃಢಗೊಂಡಿದೆ. ತಾವು ಸಿಎಂ ಹುದ್ದೆಯಿಂದ ನಿರ್ಗಮಿಸುವುದು ಹಾಗೂ ಶಿವಸೇನೆ ಶಾಸಕರಲ್ಲಿ ಅಸಮಾಧಾನ ಮೂಡಿರುವ ಬಗ್ಗೆ ಪ್ರಕಟವಾಗಿರುವ ವರದಿಗಳನ್ನು ವದಂತಿಗಳೆಂದು ಹೇಳಿದ್ದರು.

ತಾವು ಸಿಎಂ ಆಗಬೇಕೆಂಬ ಅಜಿತ್ ಪವಾರ್ ಹೇಳಿಕೆ ಈಗ ರಾಜಕೀಯ ವಲಯದಲ್ಲಿ ಸಂಚಲನ ಮೂಡಿಸಿದೆ. ಅಜಿತ್ ಪವಾರ್ ಅವರ ಈ ಹೇಳಿಕೆಯಿಂದಾಗಿ ಶಿವಸೇನೆಯ ಶಾಸಕರಲ್ಲಿ ಆತಂಕ ಮೂಡಿದೆ. ಈ ನಡುವೆ ಶಿಂಧೆ ಬಣದ ಸಚಿವರಾಗಿರುವ ಉದಯ್ ಸಮಂತ್, ಶಿಂಧೆ ಅವರ ರಾಜೀನಾಮೆ ವದಂತಿ ಸುಳ್ಳು ಎಂದು ಹೇಳಿದ್ದಾರೆ.

ಎನ್ ಸಿಪಿ ಬಿರುಕಿನ ಬಗ್ಗೆ ಪ್ರತಿಕ್ರಿಯೆ ನೀಡಿರುವ ಏಕನಾಥ್ ಶಿಂಧೆ, ಪಕ್ಷದಲ್ಲಿ ನಡೆದಿರುವ ಎಲ್ಲದರ ಬಗ್ಗೆಯೂ ಎನ್ ಸಿಪಿ ಆತ್ಮಾವಲೋಕನ ಮಾಡಿಕೊಳ್ಳಬೇಕೆಂದು ಹೇಳಿದ್ದಾರೆ.

## ಕುಸ್ತಿಪಟುಗಳ ಲೈಂಗಿಕ ಕಿರುಕುಳ ಪ್ರಕರಣ: ಬ್ರಿಜ್ ಭೂಷಣ್ ಸಿಂಗ್‌ಗೆ ದೆಹಲಿ ನ್ಯಾಯಾಲಯ ಸಮನ್ಸ್

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಮಹಿಳಾ ಕುಸ್ತಿಪಟುಗಳಿಗೆ ಲೈಂಗಿಕ ಕಿರುಕುಳ ನೀಡಿದ ಆರೋಪಕ್ಕೆ ಸಂಬಂಧಿಸಿದ ಪ್ರಕರಣದಲ್ಲಿ ಬಿಜೆಪಿ ಸಂಸದ ಮತ್ತು ನಿರ್ಗಮಿತ ಡಬ್ಲ್ಯುಎಫ್‌ಐ ಮುಖ್ಯಸ್ಥ ಬ್ರಿಜ್ ಭೂಷಣ್ ಶರಣ್ ಸಿಂಗ್ ಅವರಿಗೆ ದೆಹಲಿ ನ್ಯಾಯಾಲಯ ಶುಕ್ರವಾರ ಸಮನ್ಸ್ ನೀಡಿದ್ದು, ಅವರ ವಿರುದ್ಧ ಮುಂದುವರೆಯಲು ಸಾಕಷ್ಟು ಸಾಕ್ಷ್ಯಾಧಾರಗಳಿವೆ ಎಂದು ಹೇಳಿದೆ.

ಚಾರ್ಜ್ ಶೀಟ್ ಅನ್ನು ಗಮನದಲ್ಲಿಟ್ಟುಕೊಂಡು ಹೆಚ್ಚುವರಿ ಮುಖ್ಯ ಮೆಟ್ರೋಪಾಲಿಟನ್ ಮ್ಯಾಜಿಸ್ಟ್ರೇಟ್ ಹರ್ಜೀತ್ ಸಿಂಗ್ ಜಸ್ಪಾಲ್ ಅವರು ಜುಲೈ 18 ರಂದು ನ್ಯಾಯಾಲಯಕ್ಕೆ ಹಾಜರಾಗುವಂತೆ ಸಿಂಗ್ ಅವರಿಗೆ ಸೂಚಿಸಿದರು.

ಇದರೊಂದಿಗೆ, ಭಾರತ ಕುಸ್ತಿ ಫೆಡರೇಶನ್‌ನ ಅಮಾನತುಗೊಂಡಿರುವ ಸಹಾಯಕ ಕಾರ್ಯದರ್ಶಿ ವಿನೋದ್ ತೋಮರ್‌ಗೆ ಸಹ ನ್ಯಾಯಾಲಯ ಸಮನ್ಸ್ ನೀಡಿದೆ.



ಇಬ್ಬರೂ ಆರೋಪಿಗಳ ವಿರುದ್ಧ ಸಮನ್ಸ್ ಜಾರಿಗೊಳಿಸುವಂತೆ ಕನ್ನಾಟ್ ಪ್ಲೇಸ್ ಪೊಲೀಸ್ ಠಾಣೆಯ ಎಸ್‌ಎಚ್‌ಒಗೆ ನಿರ್ದೇಶನ ನೀಡಿದೆ. ಆರೋಪಿಗಳಿಬ್ಬರೂ ದೆಹಲಿಯಲ್ಲಿ ನೆಲೆಸಿದ್ದಾರೆ ಎಂಬುದನ್ನು ಗಮನಿಸಿದ ನ್ಯಾಯಾಧೀಶರು,

ಸಮೀಪದ ದಿನಾಂಕವನ್ನು ನೀಡುತ್ತಿರುವುದಾಗಿ ಹೇಳಿದರು.

ಐಪಿಸಿ ಸೆಕ್ಷನ್ 354, 354 ಎ (ಲೈಂಗಿಕ ಕಿರುಕುಳ), 354 ಡಿ (ಹಿಂಬಾಲಿಸುವಿಕೆ) ಮತ್ತು 506 (ಕ್ರಿಮಿನಲ್ ಬೆದರಿಕೆ ) ಅಡಿಯಲ್ಲಿ ದೆಹಲಿ ಪೊಲೀಸರು ಜೂನ್ 15 ರಂದು ಆರು ಬಾರಿ ಸಂಸದರಾಗಿರುವ ಸಿಂಗ್ ವಿರುದ್ಧ ಚಾರ್ಜ್ ಶೀಟ್ ಅನ್ನು ಸಲ್ಲಿಸಿದ್ದರು.

ತೋಮರ್ ವಿರುದ್ಧ ಐಪಿಸಿಯ ಸೆಕ್ಷನ್ 109 (ಯಾವುದೇ ಅಪರಾಧಕ್ಕೆ ಕುಮ್ಮಕ್ಕು ನೀಡುವುದು ಮತ್ತು ಶಿಕ್ಷೆಗೆ ಯಾವುದೇ ಸ್ಪಷ್ಟವಾದ ಅವಕಾಶ ನೀಡದಿದ್ದರೆ), 354, 354ಂ ಮತ್ತು 506 (ಕ್ರಿಮಿನಲ್ ಬೆದರಿಕೆ) ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ.

ಸದ್ಯ ಪ್ರಕರಣದ ಹೊರತಾಗಿ, ಅಪ್ರಾಪ್ತ ಕುಸ್ತಿಪಟು ಮಾಡಿದ ಆರೋಪಗಳ ಪ್ರಕಾರ ಸಿಂಗ್ ವಿರುದ್ಧ ಮತ್ತೊಂದು ಎಫ್‌ಐಆರ್ ದಾಖಲಿಸಲಾಗಿದೆ. ಇದನ್ನು ಲೈಂಗಿಕ ಅಪರಾಧಗಳಿಂದ ಮಕ್ಕಳ ರಕ್ಷಣೆ (ಪೊಕ್ಸೊ) ಕಾಯ್ದೆಯಡಿ ದಾಖಲಿಸಲಾಗಿದೆ.

ಸಿಂಗ್ ವಿರುದ್ಧ ಲೈಂಗಿಕ ಕಿರುಕುಳದ ಆರೋಪ ಮಾಡಿದ ಏಳು ಮಹಿಳಾ ಕುಸ್ತಿಪಟುಗಳಲ್ಲಿ ಆಕೆಯೂ ಸೇರಿದ್ದಳು.

## ರಾಜ್ಯ ಬಜೆಟ್ ಗತ ಇತಿಹಾಸಕ್ಕೆ ಮನ್ನಣೆ ನೀಡಿದೆ

■ವಿಜಯಸಾಕ್ಷಿ ಸುದ್ದಿ, ಮುಂಡರಗಿ

ಪಂಚಲೋಹಗಳ ಬೀಡು, ಉತ್ತರ ಕರ್ನಾಟಕದ ಸಹ್ಯಾದ್ರಿ, ಸಸ್ಯಕಾಶಿ ಎಂದೆಲ್ಲ ಕರೆಯಲ್ಪಡುವ ಕಪ್ಪತ್ತಗುಡ್ಡ, ಶಿಲ್ಪ ಕಲೆಯ ಲಕ್ಕುಂಡಿ ಮತ್ತು ಮಾಗಡಿ ಪಕ್ಷಿಧಾಮ ಸೇರಿದಂತೆ ಗದಗ ಜಿಲ್ಲೆಯ ಐತಿಹಾಸಿಕ ಸ್ಥಳಗಳ ಅಭಿವೃದ್ಧಿಗೆ ಸರಕಾರ ಮುಂದಾಗಿರುವುದು ಶ್ಲಾಘನೀಯ ಎಂದು ಮುಂಡರಗಿಯ ಜಾನಪದ ಕಲಾವಿದ ಗವಿಶಿದ್ದಯ್ಯ ಹಳ್ಳಿಕೇರಿಮಠ ಸಂತಸ ವ್ಯಕ್ತಪಡಿಸಿದ್ದಾರೆ.



ಆನರ ಹಲವು ವರ್ಷಗಳ ಬೇಡಿಕೆಗಳಿಗೆ ಈ ಬಾರಿಯ ಬಜೆಟ್ ಮನ್ನಣೆ ನೀಡಿದೆ. ಪರಿಸರ ಕಾಳಜಿಯೊಂದಿಗೆ ನೆಲದ ಸಾಂಸ್ಕೃತಿಕ ಹಿರಿಮೆಯನ್ನು ಸಾರಲು ಬಜೆಟ್ ಅಭಿವೃದ್ಧಿಗೆ ಆಶಯ ವ್ಯಕ್ತಪಡಿಸಿರುವುದು ಸಂತಸ ತಂದಿದೆ ಎಂದು ಅವರು ಪ್ರತಿಕ್ರಿಯಿಸಿದ್ದಾರೆ.

## ಜನವಿರೋಧಿ ಬಜೆಟ್, ರಿವರ್ಸ್ ಗೇರ್ ಸರ್ಕಾರ ಎಂಬುದು ಸಾಬೀತು: ಮಾಜಿ ಸಿಎಂ ಬೊಮ್ಮಾಯಿ



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಡಿಸಿದ ಬಜೆಟ್ ಜನ ವಿರೋಧಿ ಬಜೆಟ್ ಆಗಿದ್ದು, ಇದು ರಿವರ್ಸ್ ಗೇರ್ ಸರ್ಕಾರ ಎಂಬುದು ಸಾಬೀತಾಗಿದೆ ಎಂದು ಮಾಜಿ ಮುಖ್ಯಮಂತ್ರಿ, ಬಿಜೆಪಿ ನಾಯಕ ಬಸವರಾಜ ಬೊಮ್ಮಾಯಿ ಅವರು ಶುಕ್ರವಾರ ಹೇಳಿದ್ದಾರೆ.

ಬಜೆಟ್ ಬಳಿಕ ವಿಧಾನಸೌಧದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಬೊಮ್ಮಾಯಿ, 'ಚುನಾವಣೆ ನಂತರ ಸಿಎಂ ಸಿದ್ದರಾಮಯ್ಯ ಪೂರ್ಣ ಪ್ರಮಾಣದ ಬಜೆಟ್ ಮಂಡನೆ ಮಾಡಿದ್ದಾರೆ. ಇವತ್ತಿನ ಹಣಕಾಸಿನ ಸ್ಥಿತಿ, ಇವತ್ತಿನ ವಾಸ್ತವ ಸ್ಥಿತಿ ಬಗ್ಗೆ ಮಾತನಾಡುವ ಬದಲು ಹಳೆಯ ಕಾರ್ಯಕ್ರಮಗಳ ಬಗ್ಗೆ ಹೇಳುತ್ತಾರೆ ಎಂದರೆ, ಅವರು ಭೂತಕಾಲದಲ್ಲಿದ್ದಾರೆ. ಇದು ರಾಜಕೀಯ ಬಜೆಟ್ ಎಂದು ವಾಗ್ದಾಳಿ ನಡೆಸಿದರು. ಹಲವಾರು ಅಂಕಿ ಅಂಶಗಳನ್ನು ಆ ಸಂದರ್ಭಕ್ಕೆ ವಾಸ್ತವಾಂಶಕ್ಕೆ ತಕ್ಕಂತೆ ಎಲ್ಲ ಸರ್ಕಾರಗಳು ಮಾಡಿವೆ. ಪ್ರತಿಯೊಂದಕ್ಕೂ 2013 ಕ್ಕೆ ಹೋಲಿಕೆ ಮಾಡಿದ್ದಾರೆ. ಅದನ್ನು ನೋಡಿದರೆ ಅವರು ಹೆಚ್ಚು ಸಾಲ ಮಾಡಿದ್ದಾರೆ. ಇದೊಂದು ರಿವರ್ಸ್ ಗೇರ್ ಇರುವ ಸರ್ಕಾರ ಆಗಿದೆ ಎಂದು ಟೀಕಿಸಿದರು.

## ಉತ್ತರ ಕರ್ನಾಟಕಕ್ಕೆ ಅನ್ಯಾಯ

ಈ ಬಾರಿಯ ಬಜೆಟ್‌ನಿಂದ ಉತ್ತರ ಕರ್ನಾಟಕಕ್ಕೆ ತೀವ್ರ ಅನ್ಯಾಯವಾಗಿದೆ. 2023-24ನೇ ಸಾಲಿನ ಬಜೆಟ್ ಉತ್ತರ ಕರ್ನಾಟಕ ಸೇರಿದಂತೆ ನಾಡಿನ ಜನರ ನಿರೀಕ್ಷೆಯನ್ನು ಹುಸಿಗೊಳಿಸಿದೆ.

ರಾಜ್ಯ ಸರಕಾರದ ಮೇಲೆ ಉತ್ತರಕರ್ನಾಟಕದ ಜನರು ತುಂಬಾ ಭರವಸೆಗಳನ್ನು ಇಟ್ಟುಕೊಂಡಿದ್ದರು. ಆದರೆ ಕಾಂಗ್ರೆಸ್ ಸರಕಾರ ತನ್ನ ಮಲತಾಯಿ ಧೋರಣೆಯನ್ನು ಮುಂದುವರೆಸುವ ಮೂಲಕ ಈ ಭಾಗದ ಜನರಿಗೆ ಅನ್ಯಾಯ ಮಾಡಿದ್ದು ಖಂಡನೀಯ.

ಪ್ರಸಕ್ತ ಬಜೆಟ್ ಜನರ ಪರವಾಗಿಲ್ಲ. ಗ್ಯಾರಂಟಿ ಯೋಜನೆಗಳ ನೆಪದಲ್ಲಿ ಸಾಲದ ಹೊರೆಯನ್ನು ಹೆಚ್ಚಿಸಿದ್ದಾರೆ.



ಮುಖ್ಯವಾಗಿ ಗ್ಯಾರಂಟಿ ಯೋಜನೆಗಳ ಬಗ್ಗೆ ಸ್ಪಷ್ಟತೆಯಿಲ್ಲ. ಅಲ್ಲದೆ ಎನ್‌ಇಪಿ ರದ್ದುಗೊಳಿಸುವ ಮೂಲಕ ವಿದ್ಯಾರ್ಥಿಗಳನ್ನು ಭಾರತೀಯ ಶಿಕ್ಷಣ ನೀತಿಯಿಂದ ದೂರ ತಳ್ಳಲಾಗಿದೆ.

**– ಮುತ್ತಣ್ಣ ಕಡಗದ.**
ರೋಣ ಬಿಜೆಪಿ ಮಂಡಲದ ಅಧ್ಯಕ್ಷ.

## ನೀರು ಪೂರೈಕೆಗೆ ಟ್ಯಾಂಕರ್‌ಗಳ ವ್ಯವಸ್ಥೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಬೆಟಗೇರಿ ಅವಳಿ ನಗರಕ್ಕೆ ಪೂರೈಕೆಯಾಗುವ ಹಮ್ಮಗಿ ಜ್ಯಾಕವೆಲ್‌ನಲ್ಲಿರುವ ಪಂಪ್‌ಸೆಟ್‌ಗಳ ದುರಸ್ತಿ ಕಾರ್ಯ ಕೈಗೊಂಡಿರುವುದರಿಂದ ಅವಳಿ ನಗರದಲ್ಲಿ ನೀರು ಪೂರೈಕೆ ವ್ಯತ್ಯಯ ಉಂಟಾಗಿರುತ್ತದೆ. ಸಾರ್ವಜನಿಕರಿಗೆ ನೀರು ಪೂರೈಕೆ ಮಾಡಲು ಟ್ಯಾಂಕರ್‌ಗಳ ವ್ಯವಸ್ಥೆ ಮಾಡಲಾಗಿದೆ. ಟ್ಯಾಂಕರ್ ಅವಶ್ಯವಿರುವ ಸಾರ್ವಜನಿಕರು ನಗರಸಭೆಯ ಹೊರಗುತ್ತಿಗೆ ಸಿಬ್ಬಂದಿಯಾದ ಮಾರುತಿ ಭಜಂತ್ರಿ ಇವರಿಗೆ ದೂರವಾಣಿ ಸಂಖ್ಯೆ 9632751431 ಕರೆ ಮಾಡಿ ಸಂಪರ್ಕಿಸಬಹುದಾಗಿದೆ ಎಂದು ಗದಗ -ಬೆಟಗೇರಿ ನಗರಸಭೆಯ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ನೀವೂ ನಮ್ಮ ಜೊತೆ ಕೈಜೋಡಿಸಿ**

**'ವಿಜಯಸಾಕ್ಷಿ'**

ನಿಮ್ಮ ಮನೆಯ, ಮನದ ಪತ್ರಿಕೆ ಆಗಲೆಂದು ನಾವು ಬಯಸುತ್ತೇವೆ. ಇಲ್ಲಿ ನಿಮ್ಮ ಅಭಿಪ್ರಾಯ ಹಂಚಿಕೊಳ್ಳಲು ಮುಕ್ತ ಸ್ವಾಗತವಿದೆ.
ನೀವು ಪತ್ರಿಕೆಯ ಕುರಿತು ತಮ್ಮ ಸಲಹೆ, ಮೆಚ್ಚುಗೆ ನಮಗೆ ಬರೆದು ಕಳಿಸಿ..
ಲೇಖನ, ಸಣ್ಣ ಕತೆ, ಕವನ, ಪ್ರಬಂಧ, ಪ್ರವಾಸ ಅನುಭವ ಈ ಕುರಿತು ನೀವೂ ಬರೆಯಬಹುದು.
E-mail: vijayasakshidaily@gmail.com
ಮೊ : 9019256545

# ಗೋಡಂಬಿ ಬೆಳೆ ಬೆಳೆಯಲು ಪ್ರೋತ್ಸಾಹ

■ವಿಜಯಸಾಕ್ಷಿ ಸುದ್ದಿ, ಗದಗ

ಗೋಡಂಬಿ ಮತ್ತು ಕೋಕೋ ನಿರ್ದೇಶನಾಲಯ ಕೊಚ್ಚಿನ್ ಅವರ ವತಿಯಿಂದ ಗದಗ ಜಿಲ್ಲೆಯ ಶಿರಹಟ್ಟಿ ತಾಲೂಕಿನ ತೋಟಗಾರಿಕೆ ಇಲಾಖೆ ಸಹಯೋಗದಲ್ಲಿ ಶಿರಹಟ್ಟಿ ತಾಲೂಕಿನಲ್ಲಿ ಗೋಡಂಬಿ ಬೆಳೆಯಲು ಪ್ರೋತ್ಸಾಹ ನೀಡುತ್ತಿದ್ದು, ಹೆಚ್ಚಿನ ರೈತರು ಇದರ ಸದುಪಯೋಗ ಪಡೆದುಕೊಳ್ಳಬಹುದಾಗಿದೆ.

ಶಿರಹಟ್ಟಿ ಮತ್ತು ಲಕ್ಷ್ಮೇಶ್ವರ ತಾಲೂಕು, ಗೋಡಂಬಿ ಬೆಳೆಯಲು ಸೂಕ್ತ ಮಣ್ಣು ನೀರು ಹವಾಗುಣವಿದ್ದು, ಆಸಕ್ತ ರೈತರು ಪಹಣಿ ಪತ್ರ, ಬ್ಯಾಂಕ್ ಪಾಸ್ ಪುಸ್ತಕ, ಆಧಾರ ಕಾರ್ಡ್, ಫೋಟೋ ಹಾಗೂ ಮಣ್ಣು ಮತ್ತು ನೀರಿನ ಪರೀಕ್ಷಾ ವರದಿಯೊಂದಿಗೆ ಕಛೇರಿಗೆ ಜುಲೈ 30 ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಭೂಮಿಯನ್ನು ಆಳವಾಗಿ ಉಳಮೆ ಮಾಡಿ, ಶಿಫಾರಸ್ಸು ಮಾಡಿದ 7 ಮೀ ಘ 7 ಮೀ ಅಂತರದಲ್ಲಿ , ತಗ್ಗು ತೆಗೆದು, ಗೊಬ್ಬರ ಮಿಶ್ರಣ ತುಂಬಿ ಸಸಿಗಳನ್ನು ನಾಟಿ ಮಾಡಬೇಕು. ನಾಟಿ ಮಾಡಿದ ನಂತರ ಊರುಗೋಲು ಕೊಟ್ಟು ಪ್ರತಿ ನಿತ್ಯ ನೀರು ಕೊಡುವುದು. ಗೋಡಂಬಿ ಒಂದು ಉತ್ತಮ ಭವಿಷ್ಯದ ಬೆಳೆಯಾಗಿದ್ದು, ರೈತರಿಗೆ ಒಂದು ಉತ್ತಮ ಆದಾಯ ನೀಡುವ ಬೆಳೆಯಾಗಿದ್ದು, ಇದರ ಲಾಭವನ್ನು ಪಡೆಯಬೇಕೆಂದು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರಾದ ಸುರೇಶ ಕುಂಬಾರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆ ಸದುಪಯೋಗಕ್ಕೆ ಅವಕಾಶ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಸರ್ಕಾರವು 2023–24ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಬಿಮಾ (ವಿಮಾ) ಯೋಜನೆಯನ್ನು ಅನುಷ್ಠಾನಗೊಳಿಸಲು ಮಂಜೂರಾತಿ ನೀಡಲಾಗಿದೆ. ಈ ಯೋಜನೆಯಡಿ ಶಿರಹಟ್ಟಿ ತಾಲೂಕಿನ ಈರುಳ್ಳಿ (ಮಳೆಯಾಶ್ರಿತ), ಕೆಂಪು ಮೆಣಸಿನಕಾಯಿ (ಮಳೆಯಾಶ್ರಿತ) ಹಾಗೂ ಲಕ್ಷ್ಮೇಶ್ವರ ತಾಲೂಕಿಗೆ ಈರುಳ್ಳಿ ( ನೀರಾವರಿ), ಈರುಳ್ಳಿ (ಮಳೆಯಾಶ್ರಿತ), ಕೆಂಪು ಮೆಣಸಿನಕಾಯಿ (ನೀರಾವರಿ) ಹಾಗೂ ಕೆಂಪು ಮೆಣಸಿನಕಾಯಿ (ಮಳೆಯಾಶ್ರಿತ) ಅಧಿಸೂಚಿತ ತೋಟಗಾರಿಕೆ ಬೆಳೆಗಳಾಗಿರುತ್ತವೆ.

ಈರುಳ್ಳಿ (ನೀರಾವರಿ) ಬೆಳೆಗೆ ಪ್ರತಿ ಹೆಕ್ಟೇರಿಗೆ ರೈತರು 4025 ರೂ. ವಿಮಾ ಕಂತು ಪಾವತಿಸಬೇಕಾಗಿದ್ದು ರೈತರು ಅರ್ಜಿ ಸಲ್ಲಿಸಲು ಜುಲೈ 31 ಕೊನೆಯ ದಿನವಾಗಿದೆ. ಈರುಳ್ಳಿ ( ಮಳೆ ಆಶ್ರಿತ) ಬೆಳೆಗೆ ಪ್ರತಿ ಹೆಕ್ಟೇರಿಗೆ 3787 ರೂ. ವಿಮಾ ಕಂತು ಪಾವತಿಸಬೇಕಾಗಿದ್ದು ಅರ್ಜಿ ಸಲ್ಲಿಸಲು ಅಗಸ್ಟ 16 ಕೊನೆಯ ದಿನವಾಗಿದೆ. ಕೆಂಪು ಮೆಣಸಿನಕಾಯಿ (ನೀರಾವರಿ) ಸಾಮಾನ್ಯ ವಿಮೆಗೆ ಪ್ರತಿ ಹೆಕ್ಟೇರಿಗೆ 5375 ರೂ. ವಿಮಾ ಕಂತು ಪಾವತಿಸಬೇಕಾಗಿದ್ದು ಅರ್ಜಿ ಸಲ್ಲಿಸಲು ಜುಲೈ 31 ಕೊನೆಯ ದಿನವಾಗಿದೆ. ಕೆಂಪು ಮೆಣಸಿನಕಾಯಿ (ಮಳೆ ಆಶ್ರಿತ) ಪ್ರತಿ ಹೆಕ್ಟೇರಿಗೆ 3937 ರೂ. ವಿಮಾ ಕಂತು ಪಾವತಿಸಬೇಕಾಗಿದ್ದು ಅರ್ಜಿ ಸಲ್ಲಿಸಲು ಅಗಸ್ಟ 16 ಕೊನೆಯ ದಿನವಾಗಿದೆ.

ವಿಮಾ ಮೊತ್ತವು ಬೆಳೆ ಸಾಲ ಪಡೆಯುವ ಮತ್ತು ಬೆಳೆ ಸಾಲ ಪಡೆಯದ ರೈತರಿಗೆ ಒಂದೇ ಆಗಿರುತ್ತದೆ. ಗದಗ ಜಿಲ್ಲೆಗೆ ಬಜಾಜ್ ಅಲಿಯನ್ಸ್ ಜನರಲ್ ಇನ್ಸೂರನ್ಸ್ ಕಂಪನಿ ವಿಮಾ ಸಂಸ್ಥೆಯಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ತೋಟಗಾರಿಕೆ ಇಲಾಖೆ, ಕಂದಾಯ ಇಲಾಖೆ, ರೈತ ಸಂಪರ್ಕ ಕೇಂದ್ರ ಹಾಗೂ ಬ್ಯಾಂಕ್ ಶಾಖೆಗಳನ್ನು ಸಂಪರ್ಕಿಸಲು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರಾದ ಸುರೇಶ ವಿ ಕುಂಬಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಭಿವೃದ್ಧಿ ಪಥದ ಜನಪರ ಬಜೆಟ್

▶▶ಮೊದಲನೇ ಪುಟದಿಂದ

ನಗರಾಭಿವೃದ್ಧಿ ಮತ್ತು ಗ್ರಾಮೀಣ ಅಭಿವೃದ್ಧಿಯನ್ನು ಸಮಗ್ರವಾಗಿ ಪರಿಗಣಿಸಿರುವ ಮುಂಗಡ ಪತ್ರ ಸಮಾನ ಅಭಿವೃದ್ಧಿಯ ಕಲ್ಪನೆಗಳನ್ನು ಸಾಕಾರಗೊಳಿಸಲಿದೆ.

ಗದಗ ವೈದ್ಯಕೀಯ ಕಾಲೇಜಿನ 450 ಹಾಸಿಗೆಗಳ ಆಸ್ಪತ್ರೆಯ ಬಾಕಿ ಉಳಿದಿರುವ ಮೂಲಸೌಕರ್ಯವನ್ನು ಆದ್ಯತೆ ಮೇಲೆ ಪೂರ್ಣಗೊಳಿಸುವ ಬಗ್ಗೆ ಘೋಷಣೆ ಮಾಡಿದ್ದಾರೆ. ಈ ಉದ್ದೇಶಕ್ಕಾಗಿ ಅಗತ್ಯ ಇರುವ ಹಣಕಾಸನ್ನು ಒದಗಿಸಲಾಗಿದೆ. ಜಿಲ್ಲೆಯ ಲಕ್ಕುಂಡಿ, ಮಾಗಡಿ ಪಕ್ಷಿಧಾಮ, ಕಪ್ಪತಗುಡ್ಡ ಮುಂತಾದ ತಾಣಗಳನ್ನು ಪ್ರವಾಸೋದ್ಯಮ ತಾಣಗಳನ್ನಾಗಿ ಸಮಗ್ರವಾಗಿ ಅಭಿವೃದ್ಧಿಪಡಿಸಲು ಘೋಷಿಸಿದ್ದಾರೆ. ಅಲ್ಲದೇ, ಗದಗ ನಗರದ ಸರ್ಕಾರಿ ವಸ್ತು ಸಂಗ್ರಹಾಲಯ ಅಭಿವೃದ್ಧಿಪಡಿಸುವುದಾಗಿ ಮುಂಗಡ ಪತ್ರದಲ್ಲಿ ಘೋಷಣೆ ಮಾಡಲಾಗಿದೆ.

ಜಲಸಂಪನ್ಮೂಲ ಇಲಾಖೆಯ ವತಿಯಿಂದ ರಾಜ್ಯದ ಕುಡಿಯುವ ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಳ್ಳಲು 172 ಯೋಜನೆಗಳನ್ನು ಕೈಗೊಳ್ಳಲಾಗಿದ್ದು, ಈ ಪೈಕಿ 899 ಕೆರೆಗಳಿಗೆ ನೀರು ತುಂಬಿಸುವ ಯೋಜನೆ ಕೈಗೆತ್ತಿಕೊಳ್ಳಲಾಗಿದೆ. ಗದಗ ಜಿಲ್ಲೆಯ ಎಲ್ಲಾ ದೊಡ್ಡ ಕೆರೆಗಳಿಗೆ ನೀರು ತುಂಬಿಸುವ ಯೋಜನೆಗೆ ಚಾಲನೆ ನೀಡಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಚ್ ಕೆ ಪಾಟೀಲ ತಿಳಿಸಿದ್ದಾರೆ.

## ದೇಶಕ್ಕೇ ಮಾದರಿಯಾದ ರಾಜ್ಯ ಸರಕಾರದ ಬಜೆಟ್

▶▶ಮೊದಲನೇ ಪುಟದಿಂದ

ಕಾಂಗ್ರೆಸ್ ಪಕ್ಷ ಘೋಷಿಸಿದಂತೆ ಐದು ಗ್ಯಾರಂಟಿಗಳನ್ನು ಜಾರಿಗೆ ತರುವ ಮೂಲಕ ನುಡಿದಂತೆ ನಡೆದಿದ್ದು, ರಾಜ್ಯದ ಮಹಿಳೆಯರ ಆರ್ಥಿಕ ಸಭಲತೆಗೆ, ರೈತರ, ಕಾರ್ಮಿಕರ, ಬಡವರ ಕಲ್ಯಾಣಕ್ಕೆ ಬಜೆಟ್‌ನಲ್ಲಿ ಸಾಕಷ್ಟು ಅನುದಾನವನ್ನು ಮೀಸಲಿರಿಸಿರುವುದು ರಾಜ್ಯದ ಸರ್ವ ಜನಾಂಗದವರಲ್ಲಿ ಹೊಸ ಆಶಾಭಾವನೆಯನ್ನು ಮೂಡಿಸಿದೆ. ನಾಡಿನ ಅಭಿವೃದ್ಧಿಯೊಂದಿಗೆ ಸರ್ವರ ಹಿತವನ್ನು ಬಯಸಿರುವ ಈ ಬಜೆಟ್ ದೇಶಕ್ಕೇ ಮಾದರಿಯಾಗಿದೆ ಎಂದರು.

## ಹುತಾತ್ಮ ಯೋಧನ ಸ್ಮಾರಕ ಜಾಗೆಯನ್ನು ಅಭಿವೃದ್ಧಿಪಡಿಸಿ

▶▶ಮೊದಲನೇ ಪುಟದಿಂದ

> ನಮ್ಮ ಬೇಡಿಕೆಗಳಿಗೆ ಸ್ಪಂದಿಸಿ, ಹುತಾತ್ಮ ವೀರಯೋಧನ ಉದ್ಯಾನವನದ ಜಾಗೆಯ ಗಣಕೀಕೃತ ಪಹಣಿಯನ್ನು ತಯಾರಿಸಿ ಕೊಡದೇ ಇದ್ದರೆ ಮುಂದಿನ 40 ದಿನಗಳ ನಂತರ ಜಿಲ್ಲಾಧಿಕಾರಿಗಳ ಕಚೇರಿಯ ಮುಂದೆ ಅನಿರ್ದಿಷ್ಟಾವಧಿ ಮುಷ್ಕರವನ್ನು ಮಾಡಬೇಕಾಗುತ್ತದೆ ಎಂದು ಮನವಿಯಲ್ಲಿ ಎಚ್ಚರಿಸಿದರು.

ಶವಸಂಸ್ಕಾರ ಮಾಡಿದ್ದಾರೆ.

ನಂತರ ವೀರಯೋಧನ ಸ್ಮಾರಕ ಮತ್ತು ಉದ್ಯಾನವನಕ್ಕೆ ಶವಸಂಸ್ಕಾರ ಮಾಡಿದ ಸರಕಾರಿ ಜಾಗೆಯು ಸೂಕ್ತವಾದದ್ದು ಎಂದು ತಿಳಿದು, ಗ್ರಾಮ ಪಂಚಾಯತಿಯವರು 130*130 ಅಡಿ ಜಾಗೆಯನ್ನು ಮಂಜೂರು ಮಾಡಿ ಪಹಣಿಯನ್ನು ಕೂಡ ಮಾಡಿಕೊಟ್ಟಿದ್ದಾರೆ. ಆದರೆ ಈಗ ವೀರಯೋಧನ ಉದ್ಯಾನವನದಲ್ಲಿ ಸ್ಥಳೀಯರು ಕಸವನ್ನು ಹಾಕಿದ್ದಾರೆ ಮತ್ತು ದನದ ಶೆಡ್ಡನ್ನು ಕಟ್ಟಿಕೊಂಡಿದ್ದಲ್ಲದೆ, ಈಗ ಕಟ್ಟಡವನ್ನೂ ಕಟ್ಟುತ್ತಿದ್ದಾರೆ. ಈ ಬಗ್ಗೆ ಗ್ರಾ ಪಂ.ನವರಿಗೆ ತಿಳಿಸಿದರೂ ಸರಿಯಾಗಿ ಸ್ಪಂದಿಸುತ್ತಿಲ್ಲ ಎಂದರು.

ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘದ ಗದಗ ಜಿಲ್ಲಾಧ್ಯಕ್ಷ ಬಸಲಿಂಗಪ್ಪ ಮುಂಡರಗಿ, ಉಪಾಧ್ಯಕ್ಷ ಎನ್ ಆರ್ ದೇವಾಂಗಮಠ, ಸಂಗಪ್ಪ ತಳವಾರ, ರಮಣಿ, ವೀರನಾರಿಯರ ಸಂಘದ ಜಿಲ್ಲಾಧ್ಯಕ್ಷೆ ಇಂದಿರಾ ಹೆಬಸೂರ, ಮಲ್ಲಿಕಾರ್ಜುನ ಕೊರಕನವರ, ಪರಿಮಳ ಸೇರಿದಂತೆ ಅನೇಕರಿದ್ದರು.

### ಜಿಲ್ಲೆಯಲ್ಲಿ ವಿವಿಧ ಇಲಾಖೆಗಳಿಗೆ ಸಂಬಂಧಿಸಿದ ಒಟ್ಟು 28 ದೂರುಗಳು ದಾಖಲು–ಲೋಕಾಯುಕ್ತ ನ್ಯಾಯಮೂರ್ತಿ ಪಾಟೀಲ್

# ತಪ್ಪಿತಸ್ಥ ನೌಕರರಿಗೆ ಶಿಕ್ಷೆ

■ವಿಜಯಸಾಕ್ಷಿ ಸುದ್ದಿ, ಗದಗ

ಜನಸೇವಕರಾದ ಸರಕಾರಿ ಅಧಿಕಾರಿ, ಸಿಬ್ಬಂದಿಗಳು ತಮ್ಮ ಕಾರ್ಯವ್ಯಾಪ್ತಿಯಲ್ಲಿ ಕ್ಷಮತೆಯಿಂದ ಹಾಗೂ ಅವಿರತವಾಗಿ ಕಾರ್ಯನಿರ್ವಹಿಸಲು ಸೂಚನೆ ನೀಡಲಾಗಿದೆ ಎಂದು ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ ಅವರು ಹೇಳಿದರು.

ಜಿಲ್ಲಾಡಳಿತ ಭವನದ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಜರುಗಿದ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ನಡೆದ ಸಭೆಯ ನಂತರ ಮಾಧ್ಯಮ ಪ್ರತಿನಿಧಿಗಳೊಂದಿಗೆ ಅವರು ಮಾತನಾಡಿರು.

ಅಧಿಕಾರಿ, ಸಿಬ್ಬಂದಿಗಳು ತಮ್ಮ ಕಾರ್ಯವನ್ನು ಅಚ್ಚುಕಟ್ಟಾಗಿ ಕಾರ್ಯನಿರ್ವಹಿಸಬೇಕು. ಯಾವುದೇ ಅಧಿಕಾರಿ ಅಥವಾ ಸಿಬ್ಬಂದಿಗಳ ಮೇಲೆ ಗುರುತರ ಆರೋಪ ಕೇಳಿ ಬಂದಲ್ಲಿ ಅಂತಹವರ ವಿರುದ್ಧ ಮೊಕದ್ದಮೆ ಹೂಡಿ ತಪ್ಪಿತಸ್ಥರಾಗಿದ್ದಲ್ಲಿ ಶಿಕ್ಷೆಗೆ ಗುರಿಪಡಿಸಲಾಗುವದು ಎಂದು ತಿಳಿಸಿದರು.

ಜಿಲ್ಲೆಯ ಕಂದಾಯ, ಜಿಲ್ಲಾ ಪಂಚಾಯತ, ಸ್ಥಳೀಯ ಸಂಸ್ಥೆಗಳು, ಕೃಷಿ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಕುರಿತು ದೂರುಗಳು ಬಂದಿದ್ದು



ಈ ಕುರಿತು ನಮ್ಮ ಅಧಿಕಾರಿಗಳು ಪರಿಶೀಲನೆ ಮಾಡಿದ್ದು ಈ ಕುರಿತು ಸಭೆಯಲ್ಲಿ ಚರ್ಚಿಸಲಾಗಿದೆ. ದೂರುಗಳಿಗೆ ಸಂಬಂಧಿಸಿದಂತೆ ಮೊಕದ್ದಮೆ ಹೂಡಿ ಅವುಗಳ ಕುರಿತು ಮೇಲ್ವಿಚಾರಣೆ ಮಾಡಿ ತಪ್ಪಿತಸ್ಥರು ಯಾರೆಂದು ಕಂಡು ಹಿಡಿಯಲಾಗುವದು. ಆಸ್ಪತ್ರೆಗಳಲ್ಲಿ ವೈದ್ಯರು ಗೈರು ಹಾಜರಾಗುವುದು, ರೋಗಿಗಳಿಗೆ ಸರಿಯಾದ ಚಿಕಿತ್ಸೆ ನೀಡದೆ ಇರುವದು ಹಾಗೂ ಪ್ರಾಂಗಣವನ್ನು ಸ್ವಚ್ಛವಾಗಿಡದ ಕುರಿತು ಹಲವಾರು ವಿಷಯಗಳು ಗಮನಕ್ಕೆ ಬಂದಿದ್ದು ಇವುಗಳ ಕುರಿತು ಪರಾಮರ್ಶಿಸಲಾಗುವದು. ಜನ ಸೇವಕರು ತಮ್ಮ ಕಾರ್ಯಕ್ಷೇತ್ರದಲ್ಲಿ ಶ್ರೇಷ್ಠತೆ ಸಾಧಿಸಲು ಹೇಗೆ ಸಾಧ್ಯವಾಗುತ್ತದೆ ಎಂಬುದನ್ನು ಸಭೆಯಲ್ಲಿ ಚರ್ಚಿಸಲಾಗಿರುತ್ತದೆ.

ಜಿಲ್ಲೆಯಲ್ಲಿ ವಿವಿಧ ಇಲಾಖೆಗಳಿಗೆ ಸಂಬಂಧಿಸಿದ ಒಟ್ಟು 28 ದೂರುಗಳು ದಾಖಲಾಗಿವೆ. ಈ ದೂರುಗಳಿಗೆ ಸಂಬಂಧಿಸಿದಂತೆ ಈಗಾಗಲೇ ನೋಟಿಸ್ ಗಳನ್ನು ಜಾರಿ ಮಾಡಿ ಮಾಹಿತಿ ಕ್ರೋಡಿಕರಿಸಿ ತನಿಖೆ ನಡೆಸಲಾಗುತ್ತಿದೆ.

ಜಿಲ್ಲೆಯಲ್ಲಿ ಹಲವಾರು ಸಮಸ್ಯಗಳಿದ್ದು ಆ ಸಮಸ್ಯೆಗಳನ್ನು ಯಾವ ರೀತಿ ಪರಿಹರಿಸಬೇಕು. ಒಂದು ವೇಳೆ ಸಮಸ್ಯೆಗಳನ್ನು ಪರಿಹರಿಸದಿದ್ದಲ್ಲಿ ಯಾವ ಸಮಸ್ಯೆಗಳನ್ನು ಎದುರಿಸಬೇಕಾಗುತ್ತದೆ ಎಂಬ ಸೂಚನೆ ಅಧಿಕಾರಿಗಳಿಗೆ ನೀಡುವ ಉದ್ದೇಶದೊಂದಿಗೆ ಜಿಲ್ಲೆಗೆ ಭೇಟಿ ನೀಡಲಾಗಿರುತ್ತದೆ.

ಈ ಭೇಟಿ ಕೇವಲ ದೂರುಗಳನ್ನು ದಾಖಲಿಸಿಕೊಂಡು ತಪ್ಪಿತಸ್ಥರಿಗೆ ಶಿಕ್ಷೆಗೆ ಗುರಿ ಪಡಿಸುವದರ ಜೊತೆಗೆ ಇಂತಹ ತಪ್ಪುಗಳು ಮರುಕಳಿಸಿದರಲಿ ಎಂಬ ಉದ್ದೇಶದೊಂದಿಗೆ ಜಿಲ್ಲೆಗೆ ಭೇಟಿ ನೀಡಿ ಸಭೆ ಜರುಗಿಸಲಾಗಿದೆ ಎಂದರು.


ಪತ್ರಿಕಾ ಗೋಷ್ಠಿಯಲ್ಲಿ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಸುಶೀಲಾ.ಬಿ, ಜಿಲ್ಲಾ ಪೊಲೀಸ್ ಅಧೀಕ್ಷಕ ಬಿ.ಎಸ್.ನೇಮಗೌಡ, ಲೋಕಾಯಕ್ತ ಅಧೀಕ್ಷಕ ಸತೀಶ. ಎಸ್.ಚಿಟಗುಬ್ಬಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಗುರುಪ್ರಸಾದ.ಕೆ, ಲೋಕಾಯುಕ್ತ ಡಿ.ವೈ.ಎಸ್.ಪಿ, ಶಂಕರ ರಾಗಿ ಉಪಸ್ಥಿತರಿದ್ದರು.

## ಕಾನೂನು, ಪ್ರವಾಸೋದ್ಯಮ ಸಚಿವರ ಪ್ರವಾಸ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್. ಕೆ.ಪಾಟೀಲ ಅವರ ಜುಲೈ 8 ಹಾಗೂ 9 ರ ಪ್ರವಾಸದ ವಿವರ ಇಂತಿದೆ.

ಜುಲೈ 7 ರಂದು ರಾತ್ರಿ ಬೆಂಗಳೂರಿನಿಂದ ರೈಲಿನ ಮೂಲಕ ಹೊರಟು ಜು. 8 ರಂದು ಬೆಳಿಗ್ಗೆ 6.30 ಗಂಟೆಗೆ ಹುಬ್ಬಳ್ಳಿಗೆ ಆಗಮಿಸುವರು. ನಂತರ ಅಲ್ಲಿಂದ ಹೊರಟು ಗದಗಿಗೆ ಬೆಳಿಗ್ಗೆ 7.30ಕ್ಕೆ ಆಗಮಿಸುವರು. ಬೆಳಿಗ್ಗೆ 11.30 ರಿಂದ 1.30 ಗಂಟೆ ವರೆಗೆ ಗದಗ ಕಾಟನ್ ಸೇಲ್



ಸೊಸೈಟಿ ಆವರಣದಲ್ಲಿರುವ ಸಚಿವರ ಕಾರ್ಯಾಲಯದಲ್ಲಿ ಸಾರ್ವಜನಿಕರ ಭೇಟಿ ಮಾಡಿ ವಾಸ್ತವ್ಯ ಮಾಡುವರು.

ಜುಲೈ 9 ರಂದು ಬೆಳಿಗ್ಗೆ 9.30 ರಿಂದ 11.00 ಗಂಟೆ ವರೆಗೆ ಗದಗ ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿರುವ ಸಚಿವರ ಕಾರ್ಯಾಲಯದಲ್ಲಿ ಸಾರ್ವಜನಿಕರ ಭೇಟಿ ಮಾಡುವರು.

ನಂತರ ಬೆಳಿಗ್ಗೆ 11.30 ಗಂಟೆಗೆ ಗದಗ ನಗರದ ಕೆ.ಎಚ್. ಪಾಟೀಲ ಸಭಾಭವನದಲ್ಲಿ ಜರುಗುವ ಜಿಲ್ಲಾ ಲಾರಿ ಮಾಲಕರ ಹಾಗೂ ಚಾಲಕರ ಸಮಾವೇಶದಲ್ಲಿ ಪಾಲ್ಗೊಳ್ಳುವರು.

ಮಧ್ಯಾಹ್ನ 3.30 ಗಂಟೆಗೆ ಗದಗನಿಂದ ಹೊರಟು ಸಂಜೆ 5 ಗಂಟೆಗೆ ಸವದತ್ತಿಗೆ ತೆರಳಿ ಯಲ್ಲಮ್ಮದೇವಿಯ ದರ್ಶನ ಪಡೆಯುವರು. ಸಂಜೆ 5 ರಿಂದ 6 ವರೆಗೆ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಅಲ್ಲಿಂದ ರಸ್ತೆ ಮಾರ್ಗವಾಗಿ ಹುಬ್ಬಳ್ಳಿಗೆ ತೆರಳುವರು. ತದನಂತರ ಹುಬ್ಬಳ್ಳಿಯಿಂದ ರಾತ್ರಿ 9.40 ಕ್ಕೆ ವಿಮಾನದ ಮೂಲಕ ಬೆಂಗಳೂರಿಗೆ ಪ್ರಯಾಣ ಮಾಡುವರು ಎಂದು ಸಚಿವರ ಕಾರ್ಯಾಲಯದ ಮೂಲಗಳು ತಿಳಿಸಿವೆ.

## ಕಲ್ಯಾಣ ಭವನ ನಿರ್ಮಾಣಕ್ಕೆ ಕಾರ್ಮಿಕರ ಮನವಿ



■ವಿಜಯಸಾಕ್ಷಿ ಸುದ್ದಿ, ರೋಣ

ತಾಲೂಕಾ ಕೇಂದ್ರದಲ್ಲಿ ಕಟ್ಟಡ ಕಾರ್ಮಿಕರು ಸಭೆ ಸಮಾರಂಭಗಳನ್ನು ನಡೆಸಲು ಕಲ್ಯಾಣ ಭವನ ಅಥವಾ ಸಮುದಾಯ ಭವನವನ್ನು ನಿರ್ಮಿಸಬೇಕು ಎಂದು ಆಗ್ರಹಿಸಿ ಕರವೇ ಸ್ವಾಭಿಮಾನಿ ಬಣದ ಪದಾಧಿಕಾರಿಗಳು ಶುಕ್ರವಾರ ತಹಸೀಲ್ದಾರರಿಗೆ ಮನವಿ ಸಲ್ಲಿಸಿದರು.

ತಾಲೂಕಾಧ್ಯಕ್ಷ ಬಸವರಾಜ ಕುರಿ ಮಾತನಾಡಿ, ಅಸಂಘಟಿತ ಕಟ್ಟಡ ಕಾರ್ಮಿಕರಿಗೆ ಸಭೆ–ಸಮಾರಂಭಗಳನ್ನು ನಡೆಸಲು ತಾಲೂಕಾ ಕೇಂದ್ರ ಸ್ಥಳದಲ್ಲಿ ಕಲ್ಯಾಣ ಭವನ ಅಥವಾ ಸಮುದಾಯ ಭವನವನ್ನು ನಿರ್ಮಿಸಬೇಕು ಹಾಗೂ ಅಸಂಘಟಿತ ಕಾರ್ಮಿಕರಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಅಗತ್ಯ ಕ್ರಮತೆಗೆದುಕೊಳ್ಳಬೇಕು ಎಂದು ಆಗ್ರಹಿಸಿದರು.

ತಾಲೂಕಿನಲ್ಲಿ ಕಟ್ಟಡ ಕಾರ್ಮಿಕರು ಹೆಚ್ಚಿನ ಸಂಖ್ಯೆಯಲ್ಲಿದ್ದಾರೆ. ಆದರೂ ಸಹ ಅವರಿಗೆ ಸರಕಾರದ ಸೌಲಭ್ಯಗಳು ಮರೀಚಿಕೆಯಾಗಿವೆ.

ಸರಕಾರ ಮತ್ತು ಅಧಿಕಾರಿಗಳು ಅರ್ಹ ಫಲಾನುಭವಿಗಳನ್ನು ಗುರುತಿಸುವ ಮೂಲಕ ನ್ಯಾಯ ಒದಗಿಸಬೇಕು.

ಅಸಂಘಟಿತ ಕಾರ್ಮಿಕರ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಒದಗಿಸುವಲ್ಲಿ ಅಗತ್ಯ ಕ್ರಮವಹಿಸಬೇಕು ಎಂದರು. ತಹಸೀಲ್ದಾರರ ಅನುಪಸ್ಥಿತಿಯಲ್ಲಿ ಉಪತಹಸೀಲ್ದಾರ ಮೀನಾ ರತ್ನಾಕರ್ ಮನವಿ ಸ್ವೀಕರಿಸಿದರು.

ವಿಷ್ಣು ಕಮ್ಮಾರ, ಬಿ ಎಸ್ ಕಿರಟಗೇರಿ, ಎಸ್ ಕೆ ಇಟಗಿ, ಬುಡ್ನೇಸಾಬ ಗಡಾದ, ಸವಿತಾ ಮೆಣಸಗಿ, ಶೋಭಾ ರಾಮಣ್ಣವರ ಮುಂತಾದವರು ಈ ಸಂದರ್ಭದಲ್ಲಿ ಹಾಜರಿದ್ದರು.

## ಸಮಾಜದಲ್ಲಿ ಉತ್ತಮ ನಾಗರಿಕರಾಗಿ ಬಾಳಿ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ವಿದ್ಯಾರ್ಥಿಗಳು ತಮ್ಮ ಅಮೂಲ್ಯವಾದ ಭವಿಷ್ಯದ ಕುರಿತು ಹೆಚ್ಚು ಚಿಂತಿಸಬೇಕು ಎಂದು ಡಾ. ಮಮತಾ ಹೇಳಿದರು.

ಅವರು ಪಟ್ಟಣದ ಕನಕದಾಸ ಶಿಕ್ಷಣ ಸಮಿತಿಯ ಕಾಲೇಜು ವಿದ್ಯಾರ್ಥಿಗಳಿಗಾಗಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ಹಮ್ಮಿಕೊಂಡಿದ್ದ 'ಮಾದಕ ವಸ್ತು ವಿರೋಧಿ ದಿನಾಚರಣೆ' ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಯುವ ಜನಾಂಗ ಮಾದಕ ವಸ್ತು ಸೇವನೆಯಂತಹ ದುಶ್ಚಟಗಳಿಗೆ ಬಲಿಯಾಗಿ ತಮ್ಮ ಅಮೂಲ್ಯವಾದ ಜೀವನವನ್ನು ಹಾಳು ಮಾಡಿಕೊಳ್ಳದೇ ಸಮಾಜದಲ್ಲಿ ಉತ್ತಮ ನಾಗರಿಕರಾಗಿ ಬದುಕಬೇಕು. ಮಾದಕ ವಸ್ತು ನಿಮ್ಮನ್ನು ಮಾತ್ರ ಬಲಿ ಪಡೆಯದೇ ನಿಮ್ಮ ಕುಟುಂಬಗಳ ನೆಮ್ಮದಿಯನ್ನೂ ಹಾಳು ಮಾಡುತ್ತದೆ ಎಂದರು.

ಯೋಗ ಗುರು ಪ್ರಕಾಶ ಮದ್ದಿನ ಮಾತನಾಡಿ, ವಿದ್ಯಾರ್ಥಿ ಜೀವನ ಅತ್ಯಂತ ಅಮೂಲ್ಯವಾಗಿದ್ದು, ಈ ಸಮಯದಲ್ಲಿ ಓದಿನ ಕಡೆಗೆ ಹೆಚ್ಚಿನ ಗಮನ ನೀಡಿ ಉತ್ತಮ ಪ್ರಜೆಗಳಾಗಿ, ಸಮಾಜಕ್ಕೆ ಮಾದರಿಯಾಗಿ ಬದುಕಬೇಕು. ಮಾದಕ ವಸ್ತುಗಳಂತಹ ಚಟಗಳಿಗೆ ಬಲಿಯಾಗದೇ, ನಿಮ್ಮ ತಂದೆ–ತಾಯಿಗಳಿಗೆ ಹಾಗೂ ನಿವು ಕಲಿಯುವ ಶಿಕ್ಷಣ ಸಂಸ್ಥೆಗೆ ಹೆಸರು ತರಬೇಕು ಎಂದರು.

ಮುಳಗುಂದ ಧ ಗ್ರಾ. ಮೇಲ್ವಿಚಾರಕಿ ರೇಣುಕಾ, ಮಾಹಾದೇವಿ ನೀಲಗುಂದ, ಕಸ್ತೂರಿ ಪಾಟೀಲ್, ಡಾ. ಬಿ ವಾಯ್ ಹುಡೇದ, ಎಸ್ ಎ ಯಳವತ್ತಿ, ಎಸ್ ಕೆ ಹಿರೇವಡ್ಡರ, ಎಸ್ ಎಚ್ ಯಡ್ರಾವಿ, ಪ್ರೇಮಾ ಹವಳದ, ಸೌಂದರ್ಯ ಕುಲಕರ್ಣಿ, ಆಶಾ ಹೆಗ್ಗಣ್ಣವರ, ಅಕ್ಷತಾ ಹಕಾರಿ, ಎಸ್ ವಾಯ್ ಅಸೂಟಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಸಂತೋಷ ಚನ್ನಪ್ಪನವರ ನಿರ್ದೇಶಕರಾಗಿ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ಬೆಟಗೇರಿ

ಕ್ರಿಯಾಶೀಲ ಸಾಮಾಜಿಕ ಚಿಂತಕರಾದ ರವೀಂದ್ರ ಕಲಬುರ್ಗಿ ನೇತೃತ್ವದಲ್ಲಿ ಬಾಗಲಕೋಟ ಜಿಲ್ಲೆಯ ಅಮೀನಗಡದಲ್ಲಿ ಸ್ಥಾಪನೆಗೊಂಡು ರಾಜ್ಯಾದ್ಯಂತ 25ಕ್ಕೂ ಹೆಚ್ಚು ಶಾಖೆಗಳ ಮೂಲಕ ಸಹಕಾರ ರಂಗದಲ್ಲಿ ಕಾರ್ಯೋನ್ಮುಖವಾದ ಶ್ರೀ ಗಾಯಿತ್ರಿ ಕೋ ಆಪರೇಟಿವ್ ಸೊಸೈಟಿ ಗದಗ–ಬೆಟಗೇರಿಯ ನಿರ್ದೇಶಕರಾಗಿ ಶ್ರೀ ದತ್ತಾ ಡೆವಲಪರ್ಸ್ ನಿರ್ದೇಶಕರು, ಗದಗ ರೆಸ್ಟೋರೆಂಟ್ ಮಾಲೀಕರೂ ಆದ ಸಂತೋಷ ಚನ್ನಪ್ಪನವರ ಅವರು ಅವಿರೋಧವಾಗಿ ಆಯ್ಕೆಯಾರು.



ನಿರ್ದೇಶಕರಾಗಿ ಆಯ್ಕೆಗೊಂಡ ಸಂತೋಷ ಚನ್ನಪ್ಪನವರ ಅವರನ್ನು ಶ್ರೀ ಗಾಯಿತ್ರಿ ಕೋ ಆಪರೇಟಿವ್ ಸೊಸೈಟಿಯ ಗದಗ–ಬೆಟಗೇರಿ ಶಾಖೆಯ ನಿರ್ದೇಶಕ ಮಂಡಳಿಯ ಸದಸ್ಯರಾದ ಶ್ರೀನಿವಾಸ ಹುಬ್ಬಳ್ಳಿ, ಕೇಶವರಾಮ ಕೊಳ್ಳಿ, ಮೋಹನ ಹೊನಗುಡಿ, ಭೋಜಪ್ಪ ಹೆಗ್ಗಡೆ, ನರಸಿಂಹ ಕಾರ್ಮೋರ್ತಿ, ವ್ಯವಸ್ಥಾಪಕ ಮಂಜುನಾಥ ಬಾಪ್ರಿ, ಸೀತಾರಾಮ ಧುತ್ರಗಿ, ಸಂದೇಶ ಹುಬ್ಬಳ್ಳಿ, ಸೋಮಶೇಖರ ನಂದರಗಿ, ಸಿದ್ದು ಪುರದ ಸೇರಿದಂತೆ ಹಲವರು ಅಭಿನಂದಿಸಿ ಶುಭ ಕೋರಿದರು.

## ಜಿಲ್ಲೆಯ ಜನತೆಯ ನಿರೀಕ್ಷೆ ಹುಸಿಯಾಗಿದೆ

▶▶ಮೊದಲನೇ ಪುಟದಿಂದ

> ಉತ್ತರ ಕರ್ನಾಟಕದ ಸಹ್ಯಾದ್ರಿ ಕಪ್ಪತಗುಡ್ಡ, ಲಕ್ಕುಂಡಿ, ಮಾಗಡಿ ಪಕ್ಷಿಧಾಮದ ಅಭಿವೃದ್ಧಿಯ ಬಗ್ಗೆ ಬಜೆಟ್‌ನಲ್ಲಿ ಪ್ರಸ್ತಾಪಿಸಿರುವುದು ಸ್ವಾಗತಾರ್ಹ. ಅದರಂತೆ, ಶೆಟ್ಟಿಕೇರಿ ಪಕ್ಷಿಧಾಮ, ಬಿಂಕದಕಟ್ಟಿ ಮೃಗಾಲಯವನ್ನು ಮೇಲ್ದರ್ಜೆಗೇರಿಸುವುದು, ಜಿಲ್ಲೆಯಲ್ಲಿರುವ ಪ್ರವಾಸಿ ತಾಣಗಳ ಸಮಗ್ರ ಅಭಿವೃದ್ಧಿಯ ಕುರಿತು ಪ್ರಸ್ತಾಪಿಸದಿರುವುದು ಸಹಜವಾಗಿ ಗದಗ ಜಿಲ್ಲೆಯ ಜನರಲ್ಲಿ ನಿರಾಸೆ ಮೂಡಿಸಿದೆ.
>
> – ಅನಿಲ್ ಮೆಣಸಿನಕಾಯಿ.
> ಬಿಜೆಪಿ ಯುವ ನಾಯಕರು, ಗದಗ.

ಅದರಂತೆ, ಚುನಾವಣಾ ಸಂದರ್ಭದಲ್ಲಿ ಘೋಷಿಸಿದ್ದ ಐದು ಗ್ಯಾರಂಟಿಗಳ ಜಾರಿಗೆ ಶೇ.26ರಷ್ಟು ಸಾಲ ಪಡೆಯಲು ಸರ್ಕಾರ ತೀರ್ಮಾನಿಸಿದೆ. ಗ್ಯಾರಂಟಿ ಭಾರ ಇಳಿಸಲು ತೆರಿಗೆ ಹೆಚ್ಚಳ ಮಾಡಿ ಜನರಿಗೆ ಆರ್ಥಿಕ ಹೊರೆಯಾಗಿಸಿದ್ದು, ಕಾಂಗ್ರೆಸ್ ಸರ್ಕಾರ ಜನ ವಿರೋಧಿ ನೀತಿ ಅನುಸರಿಸಿದೆ. ಗ್ಯಾರಂಟಿ ಯೋಜನೆ ಜಾರಿಗಾಗಿ ಹಣ ಹೊಂದಿಸಲಾಗದೆ ಅಬಕಾರಿ ತೆರಿಗೆಯನ್ನು ಶೇ.20ರಷ್ಟು ಹೆಚ್ಚಿಸಿ ಎಲ್ಲ ವಿಧದ ಮದ್ಯದ ಬೆಲೆ ಏರಿಕೆ, ನೋಂದಣಿ ಮತ್ತು ಮುದ್ರಾಂಕ ಇಲಾಖೆ ತೆರಿಗೆಯನ್ನು, ಆಸ್ತಿ ನೋಂದಣಿ ದರವನ್ನು ಹೆಚ್ಚಿಸಿದೆ. ಒಂದು ಕಡೆ ಉಚಿತ ಕೊಟ್ಟು ಇನ್ನೊಂದೆಡೆ ತೆರಿಗೆ ಹೆಚ್ಚಿಸಿ ಜನರಿಂದ ಹಣ ಕಿತ್ತುಕೊಳ್ಳುವ ರಾಜ್ಯ ಸರ್ಕಾರದ ಕ್ರಮ ಸರಿಯಲ್ಲ.

ಇನ್ನು ಬಿಜೆಪಿ ಸರ್ಕಾರ ಜಾರಿಗೊಳಿಸಿದ್ದ ಕೇಂದ್ರದ ಎನ್‌ಇಪಿ, ಎಪಿಎಂಸಿ ತಿದ್ದುಪಡಿ ಕಾಯ್ದೆಯನ್ನು ಕಾಂಗ್ರೆಸ್ ಸರ್ಕಾರ ರದ್ದುಗೊಳಿಸಲು ತೀರ್ಮಾನಿಸಿದೆ. ಗೋವುಗಳ ಸಂರಕ್ಷಣೆಗಾಗಿ ಘೋಷಿಸಲಾಗಿದ್ದ 'ಜಿಲ್ಲೆಗೊಂದು ಗೋಶಾಲೆ'ಯಂತಹ ಈ ಹಿಂದಿನ ಬಿಜೆಪಿ ಸರ್ಕಾರದ ಉದ್ದೇಶಿತ ಜನಪರ ಯೋಜನೆಗಳನ್ನು ಕೈಬಿಟ್ಟಿರುವುದನ್ನು ಅನಿಲ್ ಮೆಣಸಿನಕಾಯಿ ಖಂಡಿಸಿದ್ದಾರೆ.

### 'ಸೇವೆಗೈದ ಕೈಗಳಿಗೆ ಸತ್ಕಾರದ ಸಂಭ್ರಮ' ಕಾರ್ಯಕ್ರಮದಲ್ಲಿ ಶ್ರೀ ಅವಧೂತ ಕವಿ ಗುರುರಾಜ ಗುರೂಜಿ ಅಭಿಪ್ರಾಯ

# ಅನ್ನ ವೃದ್ಧಿಯಿಂದ ಬದುಕಿನ ಸಮೃದ್ಧಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಅನ್ನ ಮಹಾಬ್ರಹ್ಮ ಎಂಬ ನುಡಿಯಿದೆ. ಮನುಷ್ಯನಿಗೆ ಜೀವಿಸಲು ಆಹಾರ ಅತ್ಯವಶ್ಯಕ. ಆದರೆ ನಮ್ಮ ನಡುವೆ ಇರುವ ಎಷ್ಟೋ ಜನರು ತುತ್ತು ಅನ್ನಕ್ಕೂ ಪರದಾಡುವ ಪರಿಸ್ಥಿತಿ ಇದೆ. ಅಂಥವರ ನೋವಿಗೆ ಸ್ಪಂದಿಸುವ ಉದ್ದೇಶದಿಂದಲೇ ಶ್ರೀ ಮಹಾತಪಸ್ವಿ ಸೇವಾ ಪ್ರತಿಷ್ಠಾನದ ವತಿಯಿಂದ 'ಅನ್ನವೃದ್ಧಿ– ಬದುಕು ಸಮೃದ್ಧಿ' ಎಂಬ ಅಭಿಯಾನ ಪ್ರಾರಂಭಿಸಿದ್ದು, ಕಳೆದ 2–3 ವರ್ಷಗಳಿಂದ ಇದಕ್ಕೆ ಸಾಕಷ್ಟು ಜನರು ಸ್ಪಂದಿಸುತ್ತಿದ್ದಾರೆ. ಈ ಅಭಿಯಾನದಿಂದ ಅನೇಕ ಬಡ ಜನರಿಗೆ ಉಪಯೋಗವಾಗಿದೆ ಎಂದು ಪ್ರತಿಷ್ಠಾನದ ಸಂಸ್ಥಾಪಕರೂ ಆಗಿರುವ ಪರಮಪೂಜ್ಯ ಅವಧೂತ ಕವಿ ಗುರುರಾಜ ಗುರೂಜಿ ಅಭಿಪ್ರಾಯಪಟ್ಟರು.

ಅವರು ಪಟ್ಟಣದ ಬಿಸಿ ರೊಟ್ಟಿ ವೀರಭದ್ರೇಶ್ವರ ದೇವಾಲಯದಲ್ಲಿ ಶ್ರೀ



ಮಹಾ ತಪಸ್ವಿ ಸೇವಾ ಪ್ರತಿಷ್ಠಾನದ ವತಿಯಿಂದ 'ಅನ್ನ ವೃದ್ಧಿ–ಬದುಕು ಸಮೃದ್ಧಿ' ಅಭಿಯಾನದ ಅಡಿಯಲ್ಲಿ 'ಸೇವೆಗೈದ ಕೈಗಳಿಗೆ ಸತ್ಕಾರದ ಸಂಭ್ರಮ' ಎಂಬ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿ ಮಾತನಾಡಿದರು.

ಅನ್ನ ವೃದ್ಧಿಯಾದರೆ ಅವರ ಬದುಕು ಸಮೃದ್ಧಿಯಾಗುತ್ತದೆ ಎನ್ನುವ ಯೋಚನೆಯಿಂದ ಈ ಅಭಿಯಾನವನ್ನು ಪ್ರಾರಂಭಿಸಿದ್ದು, ಅನೇಕ ಬಡಜನರಿಗೆ ಆಹಾರ ಪದಾರ್ಥಗಳನ್ನು ಪ್ರತಿಷ್ಠಾನದವತಿಯಿಂದ ವಿತರಿಸುತ್ತಾ ಬರಲಾಗುತ್ತಿದೆ. ಈ ನಿಟ್ಟಿನಲ್ಲಿ, ಸೇವಾ ಮನೋಭಾವನೆ ಎಲ್ಲರಲ್ಲಿ ಮೂಡಿಬರಲಿ ಎಂದು ಹಾರೈಸಿದರು.

ಪ್ರತಿಷ್ಠಾನದ ರಾಜ್ಯಾಧ್ಯಕ್ಷೆ ಶಾಂತಕುಮಾರಿ ಅವರು ಮಾತನಾಡಿ, ಪ್ರತಿಷ್ಠಾನದ ವತಿಯಿಂದ ನಿಸ್ವಾರ್ಥವಾಗಿ ಸೇವೆಗೈದ ಕೈಗಳಿಗೆ ಸತ್ಕಾರ ಮಾಡುವ ಮೂಲಕ ಅವರನ್ನು ಗೌರವಿಸುವ ಕಾರ್ಯವನ್ನು ಮಾಡಲಾಗಿದೆ. ಹತ್ತು ಹಲವಾರು ಸಮಾಜಮುಖಿ ಯೋಜನೆಗಳು ಗುರೂಜಿಯವರ ಮಾರ್ಗದರ್ಶನದಿಂದ ಪ್ರತಿಷ್ಠಾನದ ಮೂಲಕ ಕೈಗೊಳ್ಳಲಾಗುತ್ತಿದ್ದು, ದಾನ ಮಾಡಿದರೆ ಅವರ ಜೀವನವು ಸಮೃದ್ಧಿಯಾಗುತ್ತದೆ ಎನ್ನುವದನ್ನು ಎಲ್ಲರೂ ಅರಿತು ಸೇವಾ ಮನೋಭಾವದಿಂದ ಕಾರ್ಯ ಮಾಡೋಣ ಎಂದರು.

ಹರಿಹರದ ಶಾಸಕ ಬಿ ಪಿ ಹರೀಶ್ ಅವರ ಪುತ್ರ ಅರ್ಜುನ್, ಹರಿಹರದ ಪುರಸಭೆ ಉಪಾಧ್ಯಕ್ಷೆ ಅಂಬುಜಾ, ನಾಗರಾಜ್, ಎಮ್ ಆರ್ ಪಾಟೀಲ, ಪೂರ್ಣಿಮಾ ಪಾಟೀಲ, ವಿಜಯಕುಮಾರ್ ಹತ್ತಿಕಾಳ, ಶಂಕ್ರಣ್ಣ ಆದಿ, ಎಸ್ ಎಫ್ ಆದಿ ಪ್ರತಿಷ್ಠಾನದ ಉಪಶಾಖೆಯ ಎಲ್ಲಾ ಅಧಿಕಾರಿಗಳು ಹಾಗೂ ಗುರುಸೇವಾ ಬಳಗದವರು ಮತ್ತು ಭಕ್ತವೃಂದದವರು ಹಾಜರಿದ್ದರು.

# ರಾಜ್ಯ ಬಜೆಟ್‌ಗೆ ಪರ–ವಿರೋಧಗಳ ಮಿಶ್ರ ಪ್ರತಿಕ್ರಿಯೆ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 2023–24ನೇ ಸಾಲಿನ ಬಜೆಟ್‌ನ್ನು ಶುಕ್ರವಾರ ಮಂಡಿಸಿದ್ದಾರೆ. ಶಿಕ್ಷಣ ಇಲಾಖೆಗೆ 37 ಸಾವಿರ ಕೋಟಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಗೆ 24 ಸಾವಿರ ಕೋಟಿ, ಇಂಧನ ಇಲಾಖೆಗೆ 22 ಸಾವಿರ ಕೋಟಿ, ನೀರಾವರಿ ಇಲಾಖೆಗೆ 19 ಸಾವಿರ ಕೋಟಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಗೆ 18 ಸಾವಿರ ಕೋಟಿ, ಒಳಾಡಳಿತ ಮತ್ತು ಸಾರಿಗೆ ಇಲಾಖೆಗೆ 16 ಸಾವಿರ ಕೋಟಿ, ಕಂದಾಯ ಇಲಾಖೆಗೆ 16 ಸಾವಿರ ಕೋಟಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗೆ 14 ಸಾವಿರ ಕೋಟಿ, ಸಮಾಜ ಕಲ್ಯಾಣ ಇಲಾಖೆಗೆ 11 ಸಾವಿರ ಕೋಟಿ, ಲೋಕೋಪಯೋಗಿ ಇಲಾಖೆಗೆ 10 ಸಾವಿರ ಕೋಟಿ, ಕೃಷಿ ಮತ್ತು ತೋಟಗಾರಿಕೆ ಇಲಾಖೆಗೆ 5.8 ಸಾವಿರ ಕೋಟಿ, ಪಶು ಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆಗೆ 3,024 ಕೋಟಿ ರೂ.ಗಳ ಅನುದಾನ ಘೋಷಿಸಿದ್ದಾರೆ.

ಈ ಬಾರಿಯ ಬಜೆಟ್ ಕುರಿತು ಜಿಲ್ಲೆಯ ಮುಖಂಡರು, ಜನ ಸಾಮಾನ್ಯರ ಪರ–ವಿರೋಧದ ಅಭಿಪ್ರಾಯಗಳು ಹೀಗಿವೆ.

## ರಾಜ್ಯಕ್ಕೆ ವಿಶೇಷ ಮೆರುಗು ತಂದ ಬಜೆಟ್



ಮುಖ್ಯಮಂತ್ರಿ ಸಿದ್ದರಾಮಯ್ಯನವರು ಮಂಡಿಸಿದ ಬಜೆಟ್ ಎಲ್ಲ ವರ್ಗದ ಜನರಿಗೆ ಪೂರಕವಾಗಿದೆ. ಚುನಾವಣೆಯಲ್ಲಿ ರಾಜ್ಯದ ಜನತೆಗೆ ನೀಡಿದ್ದ ಗ್ಯಾರಂಟಿಗಳನ್ನು ಜಾರಿಗೊಳಿಸಲು ಬಜೆಟ್‌ನಲ್ಲಿ ಹಣ ಮೀಸಲಿರಿಸುವ ಮೂಲಕ, ಕಾಂಗ್ರೆಸ್ ನುಡಿದಂತೆ ನಡೆಯುವ ಸರ್ಕಾರ ಎಂಬುದು ಮತ್ತೊಮ್ಮೆ ಸಾಬೀತಾಗಿದೆ. ಇದರ ಜೊತೆಗೆ ಕಳಸಾ–ಬಂಡೂರಿ ನಾಲಾ ತಿರುವು ಕಾಮಗಾರಿ ಆರಂಭ, ಗದಗ ಜಿಲ್ಲೆಯ ಲಕ್ಕುಂಡಿ ಸೇರಿದಂತೆ ಉತ್ತರ ಕರ್ನಾಟಕದ ಪ್ರವಾಸೋದ್ಯಮ ಅಭಿವೃದ್ಧಿಗೂ ಆದ್ಯತೆ ನೀಡುವ ಮೂಲಕ ಗದಗವೂ ಸೇರಿ ರಾಜ್ಯಕ್ಕೆ ವಿಶೇಷ ಮೆರುಗು ತಂದ ಬಜೆಟ್ ಇದಾಗಿದೆ.

**– ಅಶೋಕ ಮಂದಾಲಿ.**
ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷರು.

## ಅಭಿವೃದ್ಧಿ ವಿರೋಧಿ ಬಜೆಟ್



ಗ್ಯಾರಂಟಿ ಯೋಜನೆಗಳ ಜಾರಿಗೆ ಸ್ಪಷ್ಟತೆ ನೀಡದ, ಆರ್ಥಿಕ ಸಂಪನ್ಮೂಲದ ಕ್ರೋಢೀಕರಣದ ಬಗ್ಗೆ ನಿಖರ ಮಾಹಿತಿ ಒದಗಿಸದ, ಉದ್ಯಮ ಹಾಗೂ ಕೃಷಿ ಕ್ಷೇತ್ರಕ್ಕೆ ಉತ್ತೇಜನವಿಲ್ಲದ, ನಿರುದ್ಯೋಗ ನಿವಾರಣೆಗೆ ಯಾವುದೇ ಭರವಸೆ ನೀಡದ, ಶಿಕ್ಷಣ ಕ್ಷೇತ್ರವನ್ನು ದಿಕ್ಕು ತಪ್ಪಿಸುವ, ಜನವಿರೋಧಿ ಹಾಗೂ ಅಭಿವೃದ್ಧಿ ವಿರೋಧಿ ಬಜೆಟ್‌ನ್ನು ಮುಖ್ಯಮಂತ್ರಿಗಳು ಮಂಡಿಸಿದ್ದಾರೆ.

ಬೆಲೆ ಏರಿಕೆ ಗ್ಯಾರಂಟಿ ಬಜೆಟ್ ಮಂಡಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಬರುವ ದಿನಗಳಲ್ಲಿ ರಾಜ್ಯದ ಆರ್ಥಿಕ ವ್ಯವಸ್ಥೆಯನ್ನು ಅಧೋಗತಿಗೆ ತೆಗೆದುಕೊಂಡು ಹೋಗುವ ಎಲ್ಲ ಸೂಚನೆಗಳನ್ನು ನೀಡಿದ್ದಾರೆ. ಸುಳ್ಳು ಭರವಸೆ ನೀಡಿ, ಅಧಿಕಾರಕ್ಕೆ ಬಂದ ಇವರು, ಅವುಗಳನ್ನು ಈಡೇರಿಸಲು ಜನ ಸಾಮಾನ್ಯರ ಮೇಲೆ ಬೆಲೆ ಏರಿಕೆಯ ಹೊರೆ ಹೊರಿಸಿದ್ದಾರೆ. ಬಡವರ ಕಲ್ಯಾಣವೆಂಬ ಬೊಗಳೆ ಬಿಟ್ಟು, ಇಂದು ಬಡವನ ಬಾಳಿಗೆ ಕೊಳ್ಳಿ ಇಟ್ಟಿದ್ದಾರೆ.

**– ಅನಿಲ ಅಬ್ಬಿಗೇರಿ.**
ಬಿಜೆಪಿ ಗದಗ ನಗರ ಮಂಡಲಾಧ್ಯಕ್ಷರು.

## ಐತಿಹಾಸಿಕ ಬಜೆಟ್



ಕಾಂಗ್ರೆಸ್ ಸರ್ಕಾರ ಬಡವರಗಾಗಿ ನೀಡಿದ ಗ್ಯಾರಂಟಿಗಳು ಇತಿಹಾಸ ನಿರ್ಮಿಸಿವೆ. ಗ್ಯಾರಂಟಿಗಳನ್ನು ಜಾರಿಗೊಳಿಸುವ ಮೂಲಕ ರಾಜ್ಯದಲ್ಲಿ ಇತಿಹಾಸ ನಿರ್ಮಿಸಿದ ಬಜೆಟ್ ಇದಾಗಿದೆ. ಎಲ್ಲಾ ಕ್ಷೇತ್ರಗಳಿಗೂ ಹೆಚ್ಚಿನ ಆದ್ಯತೆ ನೀಡಿದ್ದು, ರೈತರ ಪರವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯರವರು ಶ್ರೇಷ್ಠ ಬಜೆಟ್ ಮಂಡಿಸಿದ್ದಾರೆ.

ಉತ್ತರ ಕರ್ನಾಟಕಕ್ಕೂ ಹೆಚ್ಚಿನ ಆದ್ಯತೆಯನ್ನು ನೀಡಿದ್ದು, ಮುಖ್ಯಮಂತ್ರಿಗಳು ಹಾಗೂ ಸಚಿವ ಎಚ್ ಕೆ ಪಾಟೀಲರು ಉತ್ತರ ಕರ್ನಾಟಕದ ಪರವಾಗಿ ಐತಿಹಾಸಿಕ ಪ್ರವಾಸಿ ತಾಣಗಳಿಗೆ ಹೆಚ್ಚಿನ ಆದ್ಯತೆ ನೀಡಿದ್ದಾರೆ. ಇಂಥದೊಂದು ಅಭೂತಪೂರ್ವ ಬಜೆಟ್ ಮಂಡಿಸಿದ ಸರ್ಕಾರಕ್ಕೆ ಹಾಗೂ ಎಲ್ಲಾ ಕ್ಯಾಬಿನೆಟ್ ಸದಸ್ಯರಿಹೆ ಅಭಿನಂದನೆ.

**– ಸೈಯದ್ ಖಾಲಿದ್ ಕೊಪ್ಪಳ.**
ಸಾಮಾಜಿಕ ಕಾರ್ಯಕರ್ತ, ಕಾಂಗ್ರೆಸ್ ಮುಖಂಡ.


## ರೈತರ ಮೂಗಿಗೆ ತುಪ್ಪ ಸವರಿದ ಬಜೆಟ್



ಕೃಷಿಭಾಗ್ಯ ಯೋಜನೆ, ಕೃಷಿ ಉತ್ಪನ್ನ ಮೌಲ್ಯವರ್ಧನೆ, ಮಾರುಕಟ್ಟೆ ವ್ಯವಸ್ಥೆ, ಯಂತ್ರೋಪಕರಣ ವ್ಯವಸ್ಥೆಯೂ ಸೇರಿದಂತೆ ಅನೇಕ ರೈತಪರವಾದ ಯೋಜನೆಗಳಿಗೆ ಒತ್ತು ನೀಡಿದ್ದರೂ ಅದು ಮೂಗಿಗೆ ತುಪ್ಪ ಸವರಿದಂತೆ ಅತ್ಯಂತ ಕಡಿಮೆ ಬಜೆಟ್ ಘೋಷಿಸಲಾಗಿದೆ. ಅಲ್ಲದೇ ಸಾಂಪ್ರದಾಯಿಕ ಮತ್ತು ಸಾವಯವ ಕೃಷಿ ಪದ್ಧತಿ, ಸಿರಿಧಾನ್ಯ ಬೆಳೆಗಳ ಪ್ರೋತ್ಸಾಹ ನೀಡದಿರುವುದು ಉತ್ತಮ ಬೆಳವಣಿಗೆಯಲ್ಲ. ಸಾಮಾನ್ಯ ರೈತರಿಗೆ ನಿರಾಶಾದಾಯಕ ಬಜೆಟ್ ಇದಾಗಿದೆ.

**– ಬಾಪೂಗೌಡ ಭರಮಗೌಡ್ರ.**
ರೈತರು, ಲಕ್ಷ್ಮೇಶ್ವರ.

## ಸರ್ವರ ಅಭಿವೃದ್ಧಿಗೆ ಆದ್ಯತೆ ನೀಡಿದ ಬಜೆಟ್



ಮುಖ್ಯಮಂತ್ರಿ ಸಿದ್ದರಾಮಯ್ಯನವರು ಮಂಡಿಸಿದ ಮುಂಗಡಪತ್ರ ಸರ್ವರಿಗೂ ಸಮಬಾಳು–ಸರ್ವರಿಗೂ ಸಮಪಾಲು ಎಂಬ ತತ್ವದಡಿ ಎಲ್ಲ ವರ್ಗಗಳ ಹಿತಚಿಂತನೆಯನ್ನು ಒಳಗೊಂಡಿದೆ. ಕೃಷಿ, ಶಿಕ್ಷಣ, ಆರೋಗ್ಯ, ಔದ್ಯೋಗಿಕ, ಧಾರ್ಮಿಕ ಕ್ಷೇತ್ರ ಸೇರಿ ಎಲ್ಲ ವಿಭಾಗಗಳ ಅಭಿವೃದ್ಧಿಗೂ ಆದ್ಯತೆ ನೀಡಿದ ಅರ್ಥವತ್ತಾದ ಬಜೆಟ್ ಇದಾಗಿದೆ. ನುಡಿದಂತೆ ನಡೆಯುವ ಮುಖ್ಯಮಂತ್ರಿಗಳು, ಮಂಡಿಸಿದ ಬಜೆಟ್‌ನ ಎಲ್ಲ ಅಂಶಗಳನ್ನು ಸಮರ್ಥವಾಗಿ ಜಾರಿಗೊಳಿಸುವ ಭರವಸೆಯಿದೆ.

**– ಜಿ ಎಸ್ ಗಡ್ಡದೇವರಮಠ.**
ಮಾಜಿ ಶಾಸಕರು.

## ಸಿದ್ದು ಬಜೆಟ್ ಅರ್ಥವ್ಯವಸ್ಥೆಗೆ ಟಾನಿಕ್



ಮುಖ್ಯಮಂತ್ರಿ ಸಿದ್ದರಾಮಯ್ಯ ಮಂಡಿಸಿದ ಬಜೆಟ್ ಐದು ಉಚಿತ ಘೋಷಣೆಗಳಿಗೆ ಪ್ರಾಮುಖ್ಯತೆ ನೀಡಿದ್ದು ಕೊವಿಡ್ ಪರಿಸ್ಥಿತಿಯಿಂದ ಕಳೆಗುಂದಿದ್ದ ಅರ್ಥವ್ಯವಸ್ಥೆಗೆ ಚೈತನ್ಯ ನೀಡುವ ಟಾನಿಕ್ ಆಗಿದ್ದು ರಾಜ್ಯದ ಎಲ್ಲ ವರ್ಗಗಳನ್ನು ಗಮನದಲ್ಲಿಟ್ಟುಕೊಂಡು ಬದುಕು ಕಟ್ಟಿಕೊಡುವ ನಿಟ್ಟಿನಲ್ಲಿ ಆಶಾದಾಯಕವಾಗಿದೆ.

ಅಲ್ಪಸಂಖ್ಯಾತ ಸಮುದಾಯಗಳ ಉದ್ಯೋಗಾಕಾಂಕ್ಷಿಗಳಿಗೆ ಬೆಂಗಳೂರಿನ ಹಜ್ಜ್ ಭವನದಲ್ಲಿ ಉಚಿತ ಕೆಎಎಸ್ ಮತ್ತು ಆಎಎಸ್ ತರಬೇತಿಗೆ ಅವಕಾಶ ನೀಡಿದ್ದು ವಕ್ಫ ಬೋರ್ಡ್ ಆಸ್ತಿ ಸಂರಕ್ಷಣೆಗೆ ಹಣ ಮೀಸಲಿಟ್ಟಿರುವುದು ಹಿಂದೆಂದೂ ಕಾಣದ ರೀತಿಯಲ್ಲಿ ಹೊಸ ಮತ್ತು ಮತ್ತು ಅತ್ಯಗತ್ಯ ಯೋಜನೆಗಳನ್ನು ರೂಪಿಸಿದ್ದು ಸಂತಸ ತಂದಿದೆ

ರಾಜ್ಯದ ನೀರಾವರಿ ಯೋಜನೆಗಳಿಗೆ ಅನುದಾನ ನೀಡಿದ್ದು ಎಪಿಎಂಸಿಗಳ ಪುನಶ್ಚೇತನ ಮತ್ತು ಕೃಷಿಭಾಗ್ಯ ಯೋಜನೆಗಳಿಗೆ ಪುನರ್ಜನ್ಮ ಸಿಕ್ಕಿದ್ದು ದಾಖಲೆಯ 14 ನೇ ಬಜೆಟ್ಟಿನಲ್ಲಿ ಸಿದ್ದರಾಮಯ್ಯ ಭರ್ಜರಿ ಕೊಡುಗೆಯನ್ನು ರಾಜ್ಯದ ಜನತೆಗೆ ನೀಡಿದ್ದು ವಿಶೇಷವಾಗಿ ಗದಗ ಜಿಲ್ಲೆಯ ಕಪ್ಪತ್ತಗುಡ್ಡ ಅಭಿವೃದ್ಧಿಗೆ ಭರವಸೆ ನೀಡಿದ್ದು ಇಂದೊಂದು ಬಡವರ ಪಾಲಿನ ಶ್ರೇಷ್ಠ ಬಜೆಟ್ ಆಗಿದೆ.

**–ಅಬ್ದುಲ್ ಸಾಬ್ ಹೊಸಮನಿ.** ಕಾಂಗ್ರೆಸ್ ಮುಖಂಡರು, ರೋಣ.

## ಕೇವಲ ಪಕ್ಷ ಹಿತ ಸಾಧಿಸುವ ಬಜೆಟ್



ಸಿಎಂ ಸಿದ್ಧರಾಮಯ್ಯನವರು ಮಂಡಿಸಿರುವ ರಾಜ್ಯ ಬಜೆಟ್ ತಮ್ಮ ಐದು ಗ್ಯಾರಂಟಿಗಳನ್ನು ಈಡೇರಿಸುವ ಇರಾದೆಯಲ್ಲಿ ರಾಜ್ಯದ ಜನರಿಗೆ ಆರ್ಥಿಕ ಹೊರೆಯ ಗ್ಯಾರಂಟಿಯನ್ನು ನೀಡಿದೆ. ಈಗಾಗಲೇ ಶಕ್ತಿ ಯೋಜನೆಯಿಂದ ಕೆಎಸ್‌ಆರ್‌ಟಿಸಿ ದಿವಾಳಿಯಾಗುವ ಹಂತ ತಲುಪಿದೆ. ಮುಂದಿನ ಗ್ಯಾರಂಟಿಗಳ ಜಾರಿಗಾಗಿ ಸರ್ಕಾರ ಹರಸಾಹಸ ಪಡುತ್ತಿರುವುದು ಬಜೆಟ್‌ನಲ್ಲಿ ಸ್ಪಷ್ಟವಾಗಿದೆ. ಗ್ಯಾರಂಟಿ ಜಾರಿಗಾಗಿ ಜನರಿಗೆ ಹೊರೆ ಆಗದಂತೆ ಆದಾಯ ತರುತ್ತೇವೆ ಎಂದು ಹೇಳಿದ್ದ ಸಿದ್ಧರಾಮಯ್ಯನವರು ಈಗ ತೆರಿಗೆ ಹೆಚ್ಚು ಮಾಡಿರುವುದು ಯಾವ ನ್ಯಾಯ?

ದೇಶವನ್ನು ಪ್ರಗತಿ ಪಥದಲ್ಲಿ ಮುಂದುವರೆಸುವ ಕೇಂದ್ರದ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಕೈಬಿಟ್ಟು, ಹೊಸ ಶಿಕ್ಷಣ ನೀತಿ ಜಾರಿಗೆ ಪರಿತಪಿಸುತ್ತಿರುವುದು ವಿಪರ್ಯಾಸವಾಗಿದೆ. ಗದುಗಿಗೆ ಕೈಗಾರಿಕೆ ಅಥವಾ ಯಾವುದೇ ವಿಶೇಷ ಯೋಜನೆಗಳನ್ನು ನೀಡದೇ ಕೇವಲ ಕೆಲವು ಪ್ರವಾಸಿ ತಾಣಗಳ ಅಭಿವೃದ್ಧಿ ಎಂದು ಹೇಳಲಾಗಿದೆ. ಆದರೆ ಆ ಸ್ಥಳಗಳ ಅಭಿವೃದ್ಧಿಗೆ ಇಂತಿಷ್ಟು ಅನುದಾನ ಎಂದು ಘೋಷಣೆಯಾಗಿಲ್ಲ.

ಎಲ್ಲಾ ಕ್ಷೇತ್ರಗಳಿಗೂ ಹಿಂದಿನ ಬಿಜೆಪಿ ಸರ್ಕಾರಕ್ಕಿಂತ ಈ ಸರ್ಕಾರ ಅನುದಾನ ಕಡಿಮೆಗೊಳಿಸಿದೆ. ಮಹದಾಯಿ ಹಾಗೂ ಮೇಕೆದಾಟು ಯೋಜನೆಗಳಿಗೆ ಯಾವುದೇ ಪ್ರಾಶಸ್ತ್ಯ ನೀಡದಿರುವುದು ಖೇದಕರ. ಇದು ರಾಜ್ಯದ ಸಮಗ್ರ ಅಭಿವೃದ್ಧಿಯ ಬಜೆಟ್ ಆಗಿರದೇ, ಕೇವಲ ಪಕ್ಷ ಹಿತ ಸಾಧಿಸುವ ಬಜೆಟ್ ಆಗಿದ್ದು, ಈ ಬಜೆಟ್‌ನಿಂದ ಕಾಂಗ್ರೆಸ್‌ನ ಅಸಲಿ ಮುಖ ಗೊತ್ತಾಗಿದೆ.

**– ವಿಜಯಕುಮಾರ ಗಡ್ಡಿ.**
ಬಿಜೆಪಿ ಮುಖಂಡರು.

## ಕಾಂಗ್ರೆಸ್‌ನ ಮತ ಬ್ಯಾಂಕ್ ಗಟ್ಟಿಗೊಳಿಸುವ ಬಜೆಟ್



ಮುಖ್ಯಮಂತ್ರಿ ಸಿದ್ದರಾಮಯ್ಯನವರು ಚುನಾವಣೆಗೂ ಮುನ್ನ ಘೋಷಿಸಿರುವ ಗ್ಯಾರಂಟಿ ಯೋಜನೆಗಳಿಗೆ ಹಣ ಹೊಂದಿಸುವುದಕ್ಕಾಗಿಯೇ 2023–24ನೇ ಸಾಲಿನ ಬಜೆಟ್ ಮಂಡಿಸಿದಂತಾಗಿದೆ. ಯೋಜನಾರಹಿತ ಮತ್ತು ರಾಜ್ಯದ ಜನರನ್ನು ಸಾಲದ ಸುಳಿಗೆ ಸಿಲುಕಿಸುವ ನಿರಾಶಾದಾಯಕ ಬಜೆಟ್ ಇದಾಗಿದೆ. ಅಲ್ಲದೆ, ಕಾಂಗ್ರೆಸ್‌ನ ಮತ ಬ್ಯಾಂಕ್ ಗಟ್ಟಿಗೊಳಿಸುವ ಉದ್ದೇಶವನ್ನಷ್ಟೇ ಈ ಬಜೆಟ್ ಹೊಂದಿದೆ.

**– ಜಿ ಎಂ ಮಹಾಂತಶೆಟ್ಟರ.**
ಮಾಜಿ ಶಾಸಕರು.

## ರಾಜ್ಯದ ಅಭಿವೃದ್ಧಿಗೆ ಪೂರಕ ಬಜೆಟ್



ಮುಖ್ಯಮಂತ್ರಿ ಸಿದ್ದರಾಮಯ್ಯ ಮಂಡಿಸಿದ ಬಜೆಟ್ ರಾಜ್ಯದ ಅಭಿವೃದ್ಧಿಗೆ ಪೂರಕವಾಗಿದ್ದು, 2023–24ನೇ ಸಾಲಿನ ಬಜೆಟ್‌ನಿಂದ ನಾಡು ಪ್ರಗತಿಯತ್ತ ಸಾಗಲಿದೆ. ನಾಡಿನ ಸರ್ವ ಜನಾಂಗದ ಹಿತವನ್ನು ಬಯಸುವ ಮೂಲಕ ಐದು ಗ್ಯಾರಂಟಿ ಯೋಜನೆಗಳಿಗೆ ಅನುದಾನವನ್ನು ಕೊಟ್ಟು, ಶಿಕ್ಷಣಕ್ಕೆ, ಉದ್ಯೋಗಕ್ಕೆ, ಆಹಾರ ಭದ್ರತೆಗೆ ಅನುಕೂಲವನ್ನು ಕಲ್ಪಿಸುವ ಜೊತೆಗೆ ಮಹಿಳೆಯರ ಆರ್ಥಿಕ ಸಬಲೀಕರಣಕ್ಕೆ ಹೆಚ್ಚಿನ ಒತ್ತನ್ನು ನೀಡಿದ್ದಾರೆ. ಕೃಷಿ, ಸ್ವ–ಉದ್ಯೋಗ ಸೇರಿದಂತೆ ಇತರೆ ಅಭಿವೃದ್ಧಿಪರ ಯೋಜನೆಗಳಿಗೆ ಸಾಕಷ್ಟು ಅನುದಾನವನ್ನು ನೀಡಿರುವುದು ಐತಿಹಾಸಿಕ ಬಜೆಟ್ ಆಗಿದೆ.

**– ಅಂದಪ್ಪ ಬಿಚ್ಚೂರ.**
ಕಾಂಗ್ರೆಸ್ ಪಕ್ಷದ ಮುಖಂಡರು, ರೋಣ.

## ರೈತಪರ ಬಜೆಟ್



ಮುಖ್ಯಮಂತ್ರಿ ಸಿದ್ಧರಾಮಯ್ಯ ನೇತೃತ್ವದ ರಾಜ್ಯ ಸರಕಾರ ಮಂಡಿಸಿರುವ ಬಜೆಟ್‌ನಲ್ಲಿ ರೈತರಿಗೆ ಕಡಿಮೆ ಬಡ್ಡಿದರದ ಸಾಲದ ಮಿತಿಯನ್ನು ಹೆಚ್ಚಿಸಿರುವದು, ಎಪಿಎಂಸಿ ಕಾಯ್ದೆಯಲ್ಲಿ ತಿದ್ದುಪಡಿ ತಂದಿರುವುದೂ ಸೇರಿದಂತೆ ರೈತರ ಪರವಾದ ವಿಚಾರ, ಯೋಜನೆಗಳನ್ನು ಹೊಂದಿರುವ ಬಜೆಟ್ ಇದಾಗಿದೆ. ಘೋಷಣೆಗೆ ಮಾತ್ರ ಸೀಮಿತವಾಗದೇ ಅನುಷ್ಠಾನಗೊಂಡು ಪ್ರತಿಯೊಬ್ಬರಿಗೂ ಉಪಯುಕ್ತವಾಗಬೇಕು.

**– ಮಹೇಶ ಹೊಗೆಸೊಪ್ಪಿನ.**
ಶಿರಹಟ್ಟಿ ತಾಲೂಕಾ ಪಕ್ಷಾತೀತ ರೈತಪರ ಹೋರಾಟ ವೇದಿಕೆ ಅಧ್ಯಕ್ಷ.

# ಸಿಎಂ ಸಿದ್ದರಾಮಯ್ಯ ಅಭಿಮಾನಿಗಳಿಂದ ಸಂಭ್ರಮಾಚರಣೆ

■ವಿಜಯಸಾಕ್ಷಿ ಸುದ್ದಿ, ಮುಂಡರಗಿ



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 14ನೇ ಬಾರಿಗೆ ರಾಜ್ಯ ಬಜೆಟ್ ಮಂಡಿಸಿದ ಹಿನ್ನೆಲೆಯಲ್ಲಿ ಪಟ್ಟಣದ ಹೇಮರಡ್ಡಿ ಮಲ್ಲಮ್ಮ ವೃತ್ತದಲ್ಲಿ ತಾಲೂಕಿನ ಸಿದ್ದರಾಮಯ್ಯ ಅಭಿಮಾನಿ ಬಳಗದ ವತಿಯಿಂದ ಸಿದ್ದರಾಮಯ್ಯ ಅವರ ಭಾವಚಿತ್ರಕ್ಕೆ ಪುಷ್ಪಾರ್ಪಣೆಗೈದು, ಪರಸ್ಪರ ಸಿಹಿ ಹಂಚಿ, ಪಟಾಕಿ ಸಿಡಿಸಿ ಸಂಭ್ರಮಿಸಿದರು.

ತಾಲೂಕಾ ಕುರುಬರ ಸಮಾಜದ ಅಧ್ಯಕ್ಷ ಮಂಜುನಾಥ ಮುಂಡವಾಡ ಮಾತನಾಡಿ, ಸಿದ್ದರಾಮಯ್ಯ ಅವರು ಕರ್ನಾಟಕ ಇತಿಹಾಸದಲ್ಲೇ ದಾಖಲೆಯ 14ನೇ ಬಾರಿಗೆ ಬಜೆಟ್ ಮಂಡನೆ ಮಾಡಿದ್ದು ಹೆಮ್ಮೆಯ ಸಂಗತಿಯಾಗಿದೆ. ಸಿದ್ದರಾಮಯ್ಯನವರು ಪ್ರತಿಯೊಬ್ಬರ ಅಭಿವೃದ್ಧಿಗೆ ತಮ್ಮದೇ ಆದ ವಿಶೇಷ ಕಾಳಜಿ ಹೊಂದಿದ್ದಾರೆ. ಅವರ ನೇತೃತ್ವದಲ್ಲಿ ರಾಜ್ಯ ಅಭಿವೃದ್ಧಿ ಪಥದತ್ತ ಸಾಗಲಿ ಎಂದರು.

ದುದ್ದು ಹಣಗಿ, ದೇವಪ್ಪ ಚಿಕ್ಕಣ್ಣವರ, ಶರಣಪ್ಪ ಮುದಿಯಜ್ಜನರ, ಎ ಪಿ ದಂಡಿನ, ಸುರೇಶ ಬಣಕಾರ, ಅಡಿವೆಪ್ಪ ಚಲವಾದಿ, ಮುತ್ತು ಬಳ್ಳಾರಿ, ಲಕ್ಷ್ಮಣ ಕಾಗನೂರ, ಮಲ್ಲೇಶ ಮೇಟಿ, ಮಂಜುನಾಥ ಕಟ್ಟಿಮನಿ, ಶಶಿಕುಮಾರ ದೊಡ್ಡಮನಿ, ಶರಣಯ್ಯ ಹಿರೇಮಠ, ಪ್ರಾಣೇಶ ಚೌಡ್ಕಿ ಮುಂತಾದವರಿದ್ದರು.

## ಮಣಿಪುರದಲ್ಲಿ ನಿಲ್ಲದ ಹಿಂಸಾಚಾರ: ಯುವಕ ಸೇರಿ 3 ಸಾವು, 4 ಮಂದಿಗೆ ಗಾಯ

■ವಿಜಯಸಾಕ್ಷಿ ಸುದ್ದಿ, ಗುವಾಹಟಿ

ಮಣಿಪುರದಲ್ಲಿ ನಡೆಯುತ್ತಿರುವ ಗುಂಡಿನ ಚಕಮಕಿ ಮುಂದುವರೆದಿದ್ದು, ಶುಕ್ರವಾರ 19 ವರ್ಷದ ಯುವಕ ಸೇರಿದಂತೆ ಮೂವರು ಸಾವನ್ನಪ್ಪಿ ನಾಲ್ವರು ಗಾಯಗೊಂಡಿದ್ದಾರೆ.

ಶುಕ್ರವಾರ ಮುಂಜಾನೆ 1.30 ರ ಸುಮಾರಿಗೆ ಮೈತ್ಯೆ ಬಹುಸಂಖ್ಯಾತ ಬಿಷ್ಣುಪುರ್‌ನ ಅವಾಂಗ್ ಲೈಕೇಯ್ ಮತ್ತು ಕುಕಿ ಬಹುಸಂಖ್ಯಾತ ಚುರಚಂದ್‌ಪುರ ಜಿಲ್ಲೆಗಳ ಕಾಂಗ್ಜೈ ನಡುವಿನ ಸ್ಥಳದಲ್ಲಿ ಗುಂಡಿನ ಚಕಮಕಿ ನಡೆದಿದ್ದು, ಇದರಲ್ಲಿ ಮೂವರು ಚುರಾಚಂದ್‌ಪುರದ ಇಬ್ಬರು ಮತ್ತು ಬಿಷ್ಣುಪುರದ ಒಬ್ಬರು ಸಾವನ್ನಪ್ಪಿದ್ದಾರೆ.

### ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್. ಪಾಟೀಲರಿಂದ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನೆ–ನೌಕರರು ಕರ್ತವ್ಯದಲ್ಲಿ ಶ್ರೇಷ್ಠ ಸಾಧನೆಗೈಯ್ಯಬೇಕು

# ಸರ್ಕಾರಿ ಸೇವೆಯಲ್ಲಿ ಪ್ರಾಮಾಣಿಕತೆ ಮೈಗೂಡಿಸಿಕೊಳ್ಳಿ



■ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರಿ ನೌಕರರು ತಮ್ಮ ದೈನಂದಿನ ಕರ್ತವ್ಯದಲ್ಲಿ ಪ್ರಾಮಾಣಿಕತೆ , ಸೇವಾ ಮನೋಭಾವನೆಯನ್ನು ಮೈಗೂಡಿಸಿಕೊಳ್ಳಬೇಕು. ನೌಕರರು ಸೇವಾ ಕರ್ತವ್ಯದಲ್ಲಿ ಶ್ರೇಷ್ಠ ಸಾಧನೆ ಮಾಡಬೇಕು ಎಂದು ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್. ಪಾಟೀಲ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಶುಕ್ರವಾರ ಜಿಲ್ಲಾ ಮಟ್ಟದ ಇಲಾಖೆಗಳ ಅಧಿಕಾರಿಗಳೊಂದಿಗೆ ನಡೆದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸರ್ಕಾರಿ ನೌಕರಿಗೆ ಸೇರುವಾಗ ಅಪಾರ ಶ್ರಮಪಟ್ಟು ನಿಮ್ಮ ಹೆತ್ತವರು ವಿದ್ಯಾಭ್ಯಾಸ ನೀಡಿ ನೌಕರಿ ಪಡೆದಿರುತ್ತೀರಿ. ಸೇರಿದ ತಕ್ಷಣ ಎಲ್ಲರಂತೆ ಸರ್ಕಾರಿ ಸೇವೆಯನ್ನು ನಿರಾಸಕ್ತಿಯಿಂದ ನಿರ್ವಹಿಸುವುದು ಬೇಜವಾಬ್ದಾರಿ ಹಾಗೂ ಅಕ್ರಮ ವ್ಯವಹಾರದಲ್ಲಿ ತೊಡಗಿಕೊಳ್ಳುವುದನ್ನು ಬಿಟ್ಟು ಹೆತ್ತವರ ಆಶೋತ್ತರಗಳಿಗೆ ಬೆಲೆ ನೀಡಿ ಕರ್ತವ್ಯದಲ್ಲಿ ಸೇವಾ ಮನೋಭಾವನೆಯನ್ನು ಹಾಗೂ ಪ್ರಾಮಾಣಿಕತೆಯನ್ನು ನಿರಂತರವಾಗಿ ಪಾಲಿಸಬೇಕು ಎಂದರು.

ಸರ್ಕಾರಿ ನೌಕರಿಯನ್ನು ಪ್ರಾಮಾಣಿಕತೆಯಿಂದ ನಿರ್ವಹಿಸದೇ ಇದ್ದಲ್ಲಿ ನಿಷ್ಕಾಳಜಿ ತೋರಿದರೆ, ಭ್ರಷ್ಟಾಚಾರದಲ್ಲಿ ಪಾಲ್ಗೊಂಡರೆ ಅನಗತ್ಯ ಸಾರ್ವಜನಿಕರಿಗೆ ಕಿರುಕುಳ ನೀಡಿದರೆ, ಲಂಚ ಪಡೆದರೆ ಅಥವಾ ಲಂಚಕ್ಕೆ ಸರಿಸಮಾನವಾಗಿ ಬೇರೆ ಸಹಾಯ ಪಡೆದರೆ ನಿಮ್ಮ ಮೇಲೆ ದೂರುಗಳು ಖಂಡಿತವಾಗಿಯೂ ಬರುತ್ತವೆ. ಆಗ ನಿಮ್ಮನ್ನು ತನಿಖೆಗೆ ಒಳಪಡಿಸಬೇಕಾಗುತ್ತದೆ. ತನಿಖೆಯಲ್ಲಿ ತಪ್ಪಿತಸ್ಥರಾದರೆ ಅಥವಾ ಆರೋಪ ಸಾಬೀತಾದರೆ ಸರ್ಕಾರಿ ನೌಕರಿಗೆ ತೊಂದರೆಯಾಗುತ್ತದೆ ಅಲ್ಲದೇ ಸಮಾಜದಲ್ಲಿ ನಿಮ್ಮ ಗೌರವಕ್ಕೆ ನೀವೇ ಧಕ್ಕೆ ತಂದುಕೊಳ್ಳುತ್ತೀರಿ. ಆದಷ್ಟು ಕರ್ತವ್ಯದಲ್ಲಿ ಶ್ರದ್ಧೆ, ಪ್ರಾಮಾಣಿಕತೆ, ಸಹಾಯ ಮಾಡುವ ಮನೋಭಾವ ರೂಢಿಸಿಕೊಳ್ಳಬೇಕು. ಜೊತೆಗೆ ನಿಮ್ಮನ್ನು ನೀವು ಸಂಪೂರ್ಣವಾಗಿ ಸೇವೆಗೆ ಅರ್ಪಿಸಿಕೊಳ್ಳಬೇಕು ಎಂದರು.

ಮೂಲಭೂತ ಹಕ್ಕುಗಳಂತೆ ಮೂಲಭೂತ ಕರ್ತವ್ಯಗಳ ಪಾಲನೆಯನ್ನು ನಿರ್ವಹಿಸಬೇಕು. ಸರ್ಕಾರಿ ನೌಕರಿ ಕಾರ್ಯವ್ಯಾಪ್ತಿಯಲ್ಲಿ ಶ್ರೇಷ್ಠತೆ ಕಾಯ್ದುಕೊಳ್ಳಬೇಕು. ಜೊತೆಗೆ ನಮ್ಮ ಸಹೋದ್ಯೋಗಿಗಳಿಗೂ ಈ ಕುರಿತು ತಿಳುವಳಿಕೆ ನೀಡಬೇಕು. ಅಡಿಕೆ ಕದ್ದರೂ ಕಳ್ಳ ಆನೆ ಕದ್ದರೂ ಕಳ್ಳ ಎಂಬುದನ್ನು ಅರಿತು ಕರ್ತವ್ಯ ನಿರ್ವಹಣೆ ನಿಮ್ಮದಾಗಲಿ ಎಂದರು.

ಸಮಾಜದಲ್ಲಿ ಗೌರವಯುತ ಜೀವನ ನಡೆಸಲು ಸರ್ಕಾರ ನಿಮ್ಮ ಕೆಲಸಕ್ಕೆ ತಕ್ಕಂತೆ ವೇತನ ಸೌಲಭ್ಯಗಳನ್ನು ಕಾಲಕಾಲಕ್ಕೆ ಒದಗಿಸುತ್ತಾ ಬಂದಿದೆ. ನೀವು ಮಾಡುವ ಕೆಲಸದಲ್ಲಿ ಒಳ್ಳೆಯ ಅಧಿಕಾರಿಯಾಗಲು ಸಾಕಷ್ಟು ಅವಕಾಶಗಳಿವೆ. ನಿಮ್ಮ ಮನಸ್ಸಿನಲ್ಲಿರುವ ಉತ್ತಮ ಯೋಚನೆಗಳಿಂದ ಸಮಾಜಕ್ಕೆ ನಿಮ್ಮದೇ ಆದಂತಹ ಕೊಡುಗೆ ನೀಡಲು ನೀವು ಮುಂದಾಗಬೇಕು.

> ಕಾಮಗಾರಿ ಅನುಷ್ಠಾನ ಏಜೆನ್ಸಿಗಳಾದ ಲೋಕೋಪಯೋಗಿ ಇಲಾಖೆ, ಕೆಆರ್.ಇಡಿಎಲ್, ಜಿ.ಪಂ.ಪಿಆರ್ ಇಡಿ, ನಿರ್ಮಿತಿ ಕೇಂದ್ರಗಳು ಗುಣಮಟ್ಟದ ಕಾಮಗಾರಿಗಳನ್ನು ಕೈಗೊಳ್ಳುವೆಡೆ ಸಾಗಬೇಕು. ಅನುಷ್ಠಾನ ಏಜೆನ್ಸಿಗಳ ಮೇಲೂ ಸಹ ಸಾಕಷ್ಟು ದೂರುಗಳು ದಾಖಲಾಗಿವೆ. ಕಾಮಗಾರಿಗಳನ್ನು ಕಳಪೆ ಕೈಗೊಳ್ಳದೇ ಗುಣಮಟ್ಟ ಕಾಯ್ದುಕೊಳ್ಳುವೆಡೆ ಅನುಷ್ಠಾನ ಏಜೆನ್ಸಿಗಳು ಕಾರ್ಯನಿರ್ವಹಿಸಬೇಕು.
>
> **–ಬಿ.ಎಸ್. ಪಾಟೀಲ್, ಲೋಕಾಯುಕ್ತ ನ್ಯಾಯಮೂರ್ತಿಗಳು.**

> ತಹಸೀಲ್ದಾರರು ತಮ್ಮ ಕಾರ್ಯವ್ಯಾಪ್ತಿಯಲ್ಲಿರುವ ಪ್ರಕರಣಗಳನ್ನು ಆದ್ಯತೆ ಮೇರೆಗೆ ಪೂರ್ಣಗೊಳಿಸಬೇಕು. ಅಧಿಕಾರಿಗಳು ಸ್ಮಾರ್ಟವರ್ಕ ಮಾಡುವುದನ್ನು ರೂಢಿಸಿಕೊಳ್ಳಬೇಕು. ರೈತರಿಗೆ ವಿನಾಕಾರಣ ಕಚೇರಿಗೆ ಅಲೆದಾಡಿಸುವುದನ್ನು ತಪ್ಪಿಸಿ ಸಾಧ್ಯವಾದಲ್ಲಿ ತಾವುಗಳೇ ರೈತರ ಮನೆಗಳಿಗೆ ತೆರಳಿ ಸೇವೆ ನೀಡಬೇಕು. ಶಿಕ್ಷಣ ಕ್ಷೇತ್ರದಲ್ಲಿ ಗದಗ ಜಿಲ್ಲೆ ಮಾದರಿ ಜಿಲ್ಲೆಯಾಗಿಸಲು ಸಂಬಂಧಿತ ಅಧಿಕಾರಿಗಳು ಗಮನಹರಿಸಬೇಕು. ಶಾಲೆಗಳಲ್ಲಿ ಶುದ್ಧ ಬೆಳಕು,ಗಾಳಿ,ಕುಡಿಯುವ ನೀರು ಸೇರಿದಂತೆ ಮೂಲಭೂತ ಸೌಕರ್ಯಗಳನ್ನು ಒದಗಿಸಿ ನೈತಿಕ ಶಿಕ್ಷಣ ನೀಡಬೇಕು. ಶಾಲಾ ವಾತಾವರಣ ಶುದ್ಧವಾಗಿರಬೇಕು. ಉತ್ತಮ ವಾತಾವರಣದಲ್ಲಿ ಮಕ್ಕಳು ತಮ್ಮ ವಿದ್ಯಾರ್ಜನೆಯನ್ನು ಯಾವುದೇ ಅಡೆತಡೆಯಿಲ್ಲದೇ ನಡೆಸುವಂತಿರಬೇಕು ಎಂದು ಲೋಕಾಯುಕ್ತ ನ್ಯಾಯಮೂರ್ತಿ ಪಾಟೀಲ್ ಹೇಳಿದರು.

ತಾಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ತಮ್ಮ ಕಾರ್ಯವ್ಯಾಪ್ತಿಯಲ್ಲಿ ಬರುವ ಪ್ರತಿ ಹಳ್ಳಿ , ಮನೆ ಮನೆಗಳಲ್ಲಿಯೂ ಶೌಚಾಲಯ ನಿರ್ಮಾಣದ ಗುರಿಯನ್ನು ಸಾಧಿಸಬೇಕು. ಜೊತೆಗೆ ಸಾರ್ವಜನಿಕರಿಗೆ ಇರುವ ಅನುದಾನದಲ್ಲಿಯೇ ಉತ್ತಮ ಸೇವೆಗಳನ್ನು ಮೂಲ ಸೌಕರ್ಯಗಳನ್ನು ಒದಗಿಸಬೇಕು. ಶೌಚಾಲಯ ಇಲ್ಲದಿದ್ದರೆ ಏನಾಗುತ್ತದೆ ಎಂಬುದನ್ನು ಸರಿಯಾಗಿ ಜನಸಾಮಾನ್ಯರಿಗೆ ಅರ್ಥವಾಗುವ ಭಾಷೆಯಲ್ಲಿ ತಿಳುವಳಿಕೆ ಹೇಳಿ ಶೌಚಾಲಯ ನಿರ್ಮಿಸಿಕೊಂಡು ಅದನ್ನು ಬಳಸುವ ಕುರಿತು ಮನವರಿಕೆ ಮಾಡಿಕೊಡಬೇಕು ಎಂದರು.

ಜಿಲ್ಲಾಸ್ಪತ್ರೆ ಸೇರಿದಂತೆ ಜಿಲ್ಲೆಯ ಎಲ್ಲ ಸರ್ಕಾರಿ ಆಸ್ಪತ್ರೆಗಳಲ್ಲಿ ಸ್ವಚ್ಛತೆಗೆ ಗಮನ ಕೊಡಬೇಕು. ಆರೋಗ್ಯ ಸುಧಾರಣೆಗಾಗಿ ಬರುವ ರೋಗಿಗಳಿಗೆ ಅಲ್ಲಿಯ ವಾತಾವರಣ ಮತ್ತಷ್ಟು ಆರೋಗ್ಯ ಕೆಡಿಸುವಂತಿರಬಾರದು. ಉತ್ತಮ ದರ್ಜೆಯ ಔಷಧೋಪಚಾರದೊಂದಿಗೆ ಅಲ್ಲಿನ ವೈದ್ಯರು ಸೇವೆ ನೀಡಬೇಕು. ಸಮಾಜದ ಎಲ್ಲ ವರ್ಗದ ಜನರಿಗೂ ಉತ್ತಮ ಆರೋಗ್ಯ ಸೇವೆಗಳು ತಲುಪಬೇಕು. ಈ ನಿಟ್ಟಿನಲ್ಲಿ ಆರೋಗ್ಯ ಇಲಾಖೆ ಕಾರ್ಯಪ್ರವೃತ್ತರಾಗಬೇಕು.

ನಗರ ಪ್ರದೇಶಗಳ ಸ್ಥಿತಿಗತಿಗಳ ಕುರಿತು ಸ್ಥಳೀಯ ಆಡಳಿತಗಳು ಕೈಗೊಂಡ ಕ್ರಮಗಳ ಬಗ್ಗೆ ವಿವರ ಪಡೆದು ಮಾತನಾಡಿದ ಅವರು, ಕೊಳಚೆ ಪ್ರದೇಶ, ಒಳಚರಂಡಿ ವ್ಯವಸ್ಥೆ, ಕಸ ವಿಲೇವಾರಿ, ಸ್ವಚ್ಛತೆ ಹಾಗೂ ಪೌರ ಕಾರ್ಮಿಕರ ಬಗ್ಗೆ ಸಾಕಷ್ಟು ದೂರುಗಳು ಲೋಕಾಯುಕ್ತದಲ್ಲಿ ದಾಖಲೆಯಾಗುತ್ತವೆ. ಸರ್ಕಾರಿ ಸೇವೆಯಲ್ಲಿ ಆದಷ್ಟು ಪಾರದರ್ಶಕತೆ ಅಳವಡಿಸಿಕೊಳ್ಳಬೇಕು. ದೂರುಗಳಿಗೆ ಆಸ್ಪದ ನೀಡದಂತೆ ನಮ್ಮ ಕಾರ್ಯ ಇರಬಾರದು.

ಪ್ರತಿ ತಾಲೂಕಿನ ಎರಡು ಕುಗ್ರಾಮಗಳ ಸರ್ಕಾರಿ ಶಾಲೆಗಳಿಗೆ ಪೊಲೀಸ್ ಇಲಾಖೆಯ ಉನ್ನತ ಅಧಿಕಾರಿಗಳು ಆಕಸ್ಮಿಕ ಭೇಟಿ ನೀಡಿ ಶಾಲೆಗಳಲ್ಲಿ ನೀಡುವ ಶಿಕ್ಷಣ, ಗುಣಮಟ್ಟ ಹಾಗೂ ಮೂಲ ಸೌಕರ್ಯಗಳ ಕುರಿತು ಪರಿಶೀಲಿಸಿ ವರದಿ ಸಲ್ಲಿಸಬೇಕು. ಅಂಗನವಾಡಿ ಕೇಂದ್ರಗಳಲ್ಲಿ ಅಭ್ಯಸಿಸುವ ಮಕ್ಕಳಿಗೆ ಉತ್ತಮ ಪೌಷ್ಟಿಕ ಆಹಾರ ಒದಗಿಸಿ ಕಟ್ಟಡಗಳ ಕಿಟಕಿ ಬಾಗಿಲುಗಳಿಗೆ ಸೊಳ್ಳೆ ಪರದೆಗಳನ್ನು ಅಳವಡಿಸಲು ಕ್ರಮ ಕೈಗೊಳ್ಳುವಂತೆ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್.ಪಾಟೀಲ ಅವರು ತಿಳಿಸಿದರು.

ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ. ಸುಶೀಲಾ ಬಿ, ಜಿಲ್ಲಾ ಪೊಲೀಸ್ ಅಧೀಕ್ಷಕ ಬಿ.ಎಸ್. ನೇಮಗೌಡ ಅವರು ಜಿಲ್ಲೆಯ ಕಾರ್ಯವ್ಯಾಪ್ತಿ ಹಾಗೂ ಪ್ರಮುಖ ವಿಷಯಗಳ ಕುರಿತು ಲೋಕಾಯುಕ್ತ ನ್ಯಾಯಮೂರ್ತಿ ಬಿ. ಎಸ್. ಪಾಟೀಲ ಅವರಿಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಲೋಕಾಯುಕ್ತ ಅಧೀಕ್ಷಕ ಸತೀಶ ಎಸ್ ಚಿಟಗುಬ್ಬಿ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಕೆ. ಗುರುಪ್ರಸಾದ ಸೇರಿದಂತೆ ಜಿಲ್ಲಾ ಮಟ್ಟದ ಎಲ್ಲ ಅಧಿಕಾರಿಗಳು ಹಾಜರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka